ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 220
24-2-2025 ಸೋಮವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 220

## ಮಾ.1 ರಂದು ನೃತ್ಯ ಸಮರ್ಪಣಾ-2025 ಕಾರ್ಯಕ್ರಮ

**ದಾವಣಗೆರೆ:** ಇಲ್ಲಿನ ವಿನೋಬನಗರದಲ್ಲಿರುವ ಶ್ರೀ ಶಾರದಾ ಸಂಗೀತ ಮತ್ತು ನೃತ್ಯ ಕಲಾ ಶಾಲೆಯಿಂದ ನೃತ್ಯಕ್ಷೇತ್ರದ ಮಹಾನ್ ಚೇತನ ದಿ|ರುಕ್ಕಿಣಿದೇವಿ ಆರುಂಡೇಲರ ಸ್ಮರಣಾರ್ಥ ಮಾ.1 ರಂದು "ನೃತ್ಯ ಸಮರ್ಪಣಾ-2025" ಕಾರ್ಯಕ್ರಮವನ್ನು ನಗರದ ಪಿ.ಜೆ. ಬಡಾವಣೆಯಲ್ಲಿರುವ ಈಶ್ವರಮ್ಮ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆ ಆವರಣದಲ್ಲಿ ಏರ್ಪಡಿಸಲಾಗಿದೆ.

ಅಂದು ಸಂಜೆ 5 ಗಂಟೆಗೆ ಕಾರ್ಯಕ್ರಮದ ಉದ್ಘಾಟನೆ ನಡೆಯಲಿದ್ದು, ಮುಖ್ಯ ಅತಿಥಿಗಳಾಗಿ ಈಶ್ವರಮ್ಮ ಶಾಲಾ ಆಡಳಿತ ಮಂಡಳಿಯ ಅಧ್ಯಕ್ಷರಾದ ಸುಜಾತ ಕೃಷ್ಣ, ಈಶ್ವರಮ್ಮ ಟ್ರಸ್ಟ್‌ನ ಅಧ್ಯಕ್ಷರಾದ ಎ.ಆರ್. ಉಷಾ ರಂಗನಾಥ್, ಸಿದ್ದಗಂಗಾ ಪಿ.ಯು. ವಿಜ್ಞಾನ ಕಾಲೇಜಿನ ನಿರ್ದೇಶಕ ಡಾ? ಡಿ.ಎಸ್. ಜಯಂತ್ ಮತ್ತು ಸಿದ್ದಗಂಗಾ ಸಿ.ಬಿ.ಎಸ್.ಇ. ಶಾಲೆ ಪ್ರಾಂಶುಪಾಲರಾದ ಗಾಯತ್ರಿ ಎಸ್. ಚಿಮ್ಮದ್ ಇವರುಗಳು ಭಾಗವಹಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ಭರತನಾಟ್ಯ ರಂಗಪ್ರವೇಶ ಮಾಡಿರುವ ವಿದುಷಿ ಡಾ. ಸುನಿಧಿ ಎಂ. ಘಟಿಕರ್ ಇವರಿಗೆ 'ನರ್ತನಸಿರಿ' ಪುರಸ್ಕಾರ ಪ್ರದಾನ ಹಾಗೂ ಭರತನಾಟ್ಯ ವಿದ್ವತ್ ಅಂತಿಮ, ವಿದ್ವತ್ ಪೂರ್ವ ಮತ್ತು ಭರತನಾಟ್ಯ ಸೀನಿಯರ್ ಮತ್ತು ಜೂನಿಯರ್ ವಿಭಾಗದಲ್ಲಿ ಹೆಚ್ಚು ಅಂಕ ಪಡೆದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರವನ್ನೂ ಹಮ್ಮಿಕೊಳ್ಳಲಾಗಿದೆ.

## ಮಾ.2 ರಂದು ಚೆಸ್ ಚಾಂಪಿಯನ್ಶಿಪ್-2025 ಪಂದ್ಯಾವಳಿ

**ದಾವಣಗೆರೆ:** ನ್ಯೂ ದಾವಣಗೆರೆ ಡಿಸ್ಟ್ರಿಕ್ಟ್ ಚೆಸ್ ಅಸೋಸಿಯೇಷನ್ ಹಾಗೂ ದಾವಣಗೆರೆ ರೋಟರಿ ಕ್ಲಬ್- ವಿದ್ಯಾನಗರ ಇವರ ಸಂಯುಕ್ತಾಶ್ರಯದಲ್ಲಿ ದಾವಣಗೆರೆ ಜಿಲ್ಲಾ ಚೆಸ್ ಚಾಂಪಿಯನ್ಶಿಪ್-2025 ಪಂದ್ಯಾವಳಿಯನ್ನು ಮಾ.2 ರಂದು ವಿದ್ಯಾನಗರದಲ್ಲಿರುವ ರೋಟರಿ ಕ್ಲಬ್ ನಲ್ಲಿ ಹಮ್ಮಿಕೊಳ್ಳಲಾಗಿದೆ.

ಪಂದ್ಯಾವಳಿಯಲ್ಲಿ ಪಾಲ್ಗೊಳ್ಳಲು ಹೆಸರು ನೋಂದಾಯಿಸಲು ಹಾಗೂ ಹೆಚ್ಚಿನ ಮಾಹಿತಿಗೆ ನ್ಯೂ ದಾವಣಗೆರೆ ಡಿಸ್ಟ್ರಿಕ್ಸ್ ಚೆಸ್ ಅಸೋಸಿಯೇಷನ್ ಶ್ರೀಪಾದ್ ಸಿ. ಹೆಗಡೆ ಮೊ: 9880903417 ಸಂಪರ್ಕಿಸಬಹುದಾಗಿದೆ.

## 10 ವರ್ಷದ ಪ್ರೀತಿಗೆ ಮತ್ತೆ ಮರುಜೀವ; ಪ್ರಿಯತಮೆಯ ಗಂಡನಿಗೆ ಚೂರಿ ಇರಿದು- ಕೊಂದ ಪಾಗಲ್ ಪ್ರೇಮಿ!

**ಶಿರಸಿ:** 10 ವರ್ಷಗಳಿಂದ ಪರಸ್ಪರ ಪ್ರೀತಿಸುತ್ತಿದ್ದ



ಪ್ರಿಯತಮೆ ಕೊನೆಗೆ ಬೇ-ರೊಂದು ಮದುವೆಯಾಗಿದ್ದಕ್ಕೆ ಕೋಪಗೊಂಡ ಪಾಗಲ್ ಪ್ರೇಮಿಯೊಬ್ಬ ಪ್ರಿಯತಮೆಯ ಗಂಡನಿಗೆ ಚೂರಿ ಇರಿದು ಬರ್ಬರವಾಗಿ ಹತ್ಯೆ ಮಾಡಿಕೊಂಡಿರುವ ಶಿರಸಿಯಲ್ಲಿ ನಡೆದಿದೆ. ಮೃತ ವ್ಯಕ್ತಿಯೊಬ್ಬ ಗಂಗಾಧರ ಎಂದು ಗುರುತಿಸಲಾಗಿದೆ.

ಭಗ್ನ ಪ್ರೇಮಿ ಪ್ರೀತಮ್ ಡಿಸೋಜ ಶಿರಸಿ ಮೂಲದ ಪೂಜಾ ಎಂಬಾಕೆಯನ್ನು ಹತ್ತು ವರ್ಷಗಳಿಂದ ಪ್ರೀತಿಸುತ್ತಿದ್ದನು. ಅಲ್ಲದೆ ಇಬ್ಬರು ರಿಜಿಸ್ಟರ್ ಮ್ಯಾರೇಜ್ ಮಾಡಿಕೊಳ್ಳಲು ಯೋಜಿಸಿದ್ದರು. ಅಷ್ಟರಲ್ಲಾಗಲೇ ಪ್ರೀತಮ್ ಗೆ ಮತ್ತೊಂದು ಅಫೇರ್ ಇರುವುದು ಗೊತ್ತಾಗಿ ಪೂಜಾ ಆತನನ್ನು ಬಿಟ್ಟು ಬಿಟ್ಟಿದ್ದಳು. ನಂತರ ಗಂಗಾಧರ್ ಎಂಬಾತನನ್ನು ಪ್ರೀತಿಸಿ ಮದುವೆಯಾಗಿದ್ದಳು. ಈ ವಿಷಯ ತಿಳಿದ ಪ್ರೀತಮ್ ಪೂಜಾಗೆ ಕರೆ ಮಾಡಿ ಕ್ಷಮೆಯಾಚಿಸಿದ್ದಾನೆ. ನಂತರ ಇಬ್ಬರ ಮಧ್ಯೆ ಮತ್ತೆ ಪ್ರೀತಿ ಶುರುವಾಗಿದೆ.

ಈ ಮಧ್ಯೆ ತಮ್ಮಿಬ್ಬರ ಪ್ರೀತಿಗೆ ಗಂಗಾಧರ್ ಮುಳ್ಳಾಗಿದ್ದಾನೆ ಎಂದು ಇಬ್ಬರು ಬಾವಿಸಿದ್ದಾರೆ. ಹೀಗಾಗಿ ಪ್ರೀತಮ್ ನಿನ್ನೆ ಶಿರಸಿಗೆ ಬಂದಿದ್ದ ಗಂಗಾಧರ್ ಜೊತೆ ಜಗಳ ತೆಗೆದು ಆತನಿಗೆ ಚೂರಿ ಇರಿದು ಕೊಂದಿದ್ದಾನೆ. ಕೊಲೆ ವಿಷಯ ತಿಳಿದು ಸ್ಥಳಕ್ಕೆ ಬಂದ ಪೊಲೀಸರು ತನಿಖೆ ಕೈಗೊಂಡಿದ್ದರು. ಈ ವೇಳೆ ಗಂಗಾಧರ್ ಪತ್ನಿ ಪೂಜಾಳನ್ನು ಕರೆದು ವಿಚಾರಣೆ ನಡೆಸಿದ್ದಾರೆ. ಆಗ ಪೂಜಾ ಪ್ರೀತಮ್ ಹೆಸರನ್ನು ಬಾಯಿಬಿಟ್ಟಿದ್ದಾಳೆ. ಕೂಡಲೇ ಅಲರ್ಟ್ ಆದ ಉತ್ತರ ಕನ್ನಡ ಎಸ್ ಪಿ ಎಂ ನಾರಾಯಣ್ ಅವರು ತಂಡಗಳನ್ನು ರಚಿಸಿದ್ದು ಯಲ್ಲಾಪುರದಿಂದ ಇನ್ನೇನು ಜಿಲ್ಲೆಯ ಗಡಿ ದಾಟಲು ಯತ್ನಿಸುತ್ತಿದ್ದ ಪ್ರೀತಮ್ ನನ್ನು ಬಂಧಿಸಿದ್ದಾರೆ.

## ದೆಹಲಿ ವಿಧಾನಸಭೆ ವಿರೋಧ ಪಕ್ಷದ ನಾಯಕಿಯಾಗಿ ಅತಿಶಿ ಆಯ್ಕೆ

**ನವದೆಹಲಿ:** ಭಾನುವಾರ ಇಲ್ಲಿ ನಡೆದ ಎಎಪಿ ಶಾಸಕರ



ಸಭೆಯಲ್ಲಿ ಮಾಜಿ ಮುಖ್ಯಮಂತ್ರಿ ಅತಿಶಿ ಅವರನ್ನು ದೆಹಲಿ ವಿಧಾನಸಭೆಯ ವಿರೋಧ ಪಕ್ಷದ ನಾಯಕಿಯನ್ನಾಗಿ ಆಯ್ಕೆ ಮಾಡಲಾಗಿದೆ ಎಂದು ಪಕ್ಷದ ಮುಖಂಡರು ತಿಳಿಸಿದ್ದಾರೆ.

ಎಎಪಿ ಮುಖ್ಯಸ್ಥ ಅರವಿಂದ ಕೇಜ್ರಿವಾಲ್ ಸೇರಿದಂತೆ ಆಮ್ ಆದ್ಮಿ ಪಕ್ಷದ 22 ಶಾಸಕರು ಸಭೆಯಲ್ಲಿ ಭಾಗವಹಿಸಿದ್ದರು. ಸಭೆಯಲ್ಲಿ ಅತಿಶಿ ಅವರನ್ನು ವಿರೋಧ ಪಕ್ಷದ ನಾಯಕಿಯನ್ನಾಗಿ ಆಯ್ಕೆ ಮಾಡಲಾಗಿದೆ. ಈ ಕುರಿತು ಪಕ್ಷಕ್ಕೆ ಕೃತಜ್ಞತೆ ವ್ಯಕ್ತಪಡಿಸಿದ ಅವರು, 'ನನ್ನಲ್ಲಿ ನಂಬಿಕೆಯನ್ನು ಇಟ್ಟಿದ್ದಕ್ಕಾಗಿ ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ ಕೇಜ್ರಿವಾಲ್ ಮತ್ತು ಶಾಸಕಾಂಗ ಪಕ್ಷಕ್ಕೆ ಧನ್ಯವಾದಗಳು. ಪ್ರಬಲ ಪ್ರತಿಪಕ್ಷವು ಜನರ ಧ್ವನಿಯನ್ನು ಎತ್ತಿ ಹಿಡಿಯುತ್ತದೆ. ಆಮ್ ಆದ್ಮಿ ಪಕ್ಷವು ಬಿಜೆಪಿ ನೀಡಿದ ಎಲ್ಲ ಭರವಸೆಗಳನ್ನು ಈಡೇರಿಸುತ್ತದೆ' ಎಂದರು.

ದೆಹಲಿ ವಿಧಾನಸಭೆಯ ಮೊದಲ ಅಧಿವೇಶನ ಫೆಬ್ರುವರಿ 24 ರಿಂದ ಆರಂಭವಾಗಲಿದೆ. ಮೂರು ದಿನ ನಡೆಯುವ ಅಧಿವೇಶನದಲ್ಲಿ ಆಡಳಿತಾರೂಢ ಬಿಜೆಪಿ ಸರ್ಕಾರವು ಹಿಂದಿನ ಎಎಪಿ ಸರ್ಕಾರದ ವಿರುದ್ಧ ಬಾಕಿ ಉಳಿದಿರುವ ಸಿಎಜಿ ವರದಿಗಳನ್ನು ಸದನದಲ್ಲಿ ಮಂಡಿಸಲಾಗುವುದು

### ಚಾಲಕ, ನಿರ್ವಾಹಕರ ಮೇಲೆ ಹಲ್ಲೆ

# ಮಹಾರಾಷ್ಟ್ರ-ಕರ್ನಾಟಕ ಬಸ್ ಸಂಚಾರ ಸ್ಥಗಿತ

**ಬೆಳಗಾವಿ:** ತಾಲ್ಲೂಕಿನ ಸಣ್ಣ ಬಾಳೇಕುಂದ್ರಿ ಗ್ರಾಮದಲ್ಲಿ ಶುಕ್ರವಾರ ವಾಯವ್ಯ ಸಾರಿಗೆ ಸಂಸ್ಥೆಯ ಬಸ್ ನಿರ್ವಾಹಕ ಮತ್ತು ಚಾಲಕ ಮೇಲಿನ ಹಲ್ಲೆ ಪ್ರಕರಣದಿಂದ ಕರ್ನಾಟಕ ಮತ್ತು ಮಹಾರಾಷ್ಟ್ರ ನಡುವೆ ಬಸ್‌ಗಳ ಸಂಚಾರ ವ್ಯತ್ಯಯವಾಗಿದೆ. ಶನಿವಾರ ಸಂಜೆ 7ರ ಬಳಿಕ ಎರಡೂ ಕಡೆಯ ಬಸ್‌ಗಳ ಸಂಚಾರ ಗಡಿಯವರೆಗೆ ಮಾತ್ರ ಸೀಮಿತಗೊಂಡಿದೆ.

ಬೆಳಗಾವಿಯಿಂದ ಮಹಾರಾಷ್ಟ್ರದ ವಿವಿಧ ನಗರಗಳಿಗೆ ನಿತ್ಯ 90 ಬಸ್ ಸಂಚರಿಸುತ್ತಿದ್ದವು. ಆದರೆ, ಪೊಲೀಸರ ಸೂಚನೆ ಮೇರೆಗೆ ವಾಯವ್ಯ ಸಾರಿಗೆ ಸಂಸ್ಥೆಯವರು ಸಂಜೆ 7ಕ್ಕೆ ಮಹಾರಾಷ್ಟ್ರಕ್ಕೆ ಬಸ್ ಸಂಚಾರ ಸ್ಥಗಿತಗೊಳಿಸಿದರು. ನಿಪ್ಪಾಣಿ ತಾಲ್ಲೂಕಿನ ಕೊಗನೊಳ್ಳಿಯವರೆಗೆ (ಕರ್ನಾಟಕ ಮಹಾರಾಷ್ಟ್ರ ಗಡಿಯವರೆಗೆ ಮಾತ್ರ ಬಸ್ ಹೋಗುತ್ತಿವೆ.

ಕೊಲ್ಲಾಪುರ ಮಾರ್ಗವಾಗಿ ದಿನವೂ ಮಹಾರಾಷ್ಟ್ರ ಸಾರಿಗೆಯ 30 ಬಸ್ ಬರುತ್ತಿದ್ದವು. ಶನಿವಾರ 20 ಬಸ್ ಮಾತ್ರ ಬಂದಿವೆ. ಇದರಲ್ಲಿ ಮೂರು ಬಸ್‌ಗಳು ಕೇಂದ್ರ ಬಸ್ ನಿಲ್ದಾಣ ಪ್ರವೇಶಿಸಿವೆ. ಉಳಿದ ಬಸ್‌ಗಳ ಚಾಲಕರು ಪ್ರಯಾಣಿಕರನ್ನು

ನಗರದಿಂದ ದೂರದಲ್ಲಿ ಇಳಿಸಿ ವಾಪಸ್ ಹೋಗಿದ್ದಾರೆ

**ದೂರು-ಪ್ರತಿ ದೂರು:** 'ಕನ್ನಡದಲ್ಲಿ ಮಾತನಾಡಿದ್ದಕ್ಕೆ ಗುಂಪುಗೂಡಿ ಹಲ್ಲೆ ಮಾಡಲಾಗಿದೆ' ಎಂದು ಆರೋಪಿಸಿ ಬಸ್ ಚಾಲಕ ಕತಾಲ್ ಸಾಬ್ ಮೊಮಿನ್ ಅವರು ಶುಕ್ರವಾರ ರಾತ್ರಿ ಮಾರಿಹಾಳ ಪೊಲೀಸ್



ಠಾಣೆಗೆ ದೂರು ನೀಡಿದ್ದಾರೆ.

ಇದಕ್ಕೆ ಪ್ರತಿಯಾಗಿ ಘಟನೆಗೆ ಕಾರಣವಾದ ಬಾಲಕಿಯು ನಿರ್ವಾಹಕ ಮಹಾದೇವ ವಿರುದ್ಧ ಪೋಕ್ಸೊ ಪ್ರಕರಣ ದಾಖಲು ಮಾಡಿದ್ದಾರೆ.'ನಿರ್ವಾಹಕ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ. ಕೆಟ್ಟ ಪದ ಬಳಸಿ, ಕೆಟ್ಟದಾಗಿ ಸನ್ನೆ ಮಾಡಿದ್ದಾರೆ' ಎಂದು ದೂರಿನಲ್ಲಿ ಆರೋಪಿಸಲಾಗಿದೆ.

**ಏನಿದು ಪ್ರಕರಣ?:** ಬಸ್ ಅನ್ನು ಶುಕ್ರವಾರ ಹತ್ತಿದ ಬಾಲಕಿ ಆಧಾರ್ ಕಾರ್ಡ್ ತೋರಿಸಿ ತನಗೆ ಹಾಗೂ ತನ್ನ ಸ್ನೇಹಿತನಿಗೆ ಎರಡು ಟಿಕೆಟ್ ಕೊಡಲು ಹೇಳಿದರು. ಇದಕ್ಕೆ ಉತ್ತರಿಸಿದ ನಿರ್ವಾಹಕ, 'ನೀವು ಮಾತ್ರ ಉಚಿತವಾಗಿ ಪ್ರಯಾಣಿಸಬಹುದು. ಹುಡುಗನಿಗೆ ಹಣ ಕೊಟ್ಟು, ಟಿಕೆಟ್ ಪಡೆಯಿರಿ' ಎಂದರು. ಈ ವೇಳೆ ಮಾತು ತಾರಕಕ್ಕೇರಿ ಜಗಳವಾಯಿತು. ಬಸ್ ಸಣ್ಣ ಬಾಳೇಕುಂದ್ರಿ ಗ್ರಾಮ ತಲುಪಿದಾಗ, ಬಾಲಕಿ ಊರಿನವರಿಗೆ ದೂರಿದ್ದರು. ಏಕಾಏಕಿ ಗುಂಪುಗೂಡಿದ ಜನ ಬಸ್ ಏರಿ ಚಾಲಕ ಮತ್ತು ನಿರ್ವಾಹಕರನ್ನು ಥಳಿಸಿದ್ದರು.

### ಮೂವರ ಬಂಧನ

ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾರುತಿ ತುರುಮುರಿ, ರಾಹುಲ್ ರಾಜು ನಾಯ್ಡು, ಬಾಳು ಗೋಜಗೇಕ ಎಂಬುವರನ್ನು ಮಾರಿಹಾಳ ಠಾಣೆ ಪೊಲೀಸರು ಬಂಧಿಸಿದ್ದಾರೆ. ಇದರಲ್ಲಿ ಕಾನೂನು ಸಂಘರ್ಷಕ್ಕೆ ಒಳಗಾದ ಇನ್ನೊಬ್ಬ ಬಾಲಕ ಆರೋಪಿ ಆಗಿದ್ದಾನೆ. ಮೂವರನ್ನು ಶನಿವಾರ ಸಂಜೆ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿದ್ದು, 14 ದಿನಗಳ ನ್ಯಾಯಾಂಗ ಬಂಧನಕ್ಕೆ ನೀಡಲಾಗಿದೆ.

## ಶೀಘ್ರದಲ್ಲಿಯೇ ವೃತ್ತಿಪರ ತರಬೇತಿ ಕೇಂದ್ರ ಆರಂಭ: ಸಂಸದೆ ಡಾ. ಪ್ರಭಾ



**ದಾವಣಗೆರೆ:** ಜಿಲ್ಲೆಯ ವಿದ್ಯಾರ್ಥಿಗಳಿಗಾಗಿ ಉದ್ಯೋಗಾವಕಾಶ ಕೇಂದ್ರಿತ ವೃತ್ತಿಪರ ತರಬೇತಿ ಹಾಗೂ ನಾಗರಿಕ ಸೇವೆಗಳಾದ ಐಎಎಸ್ ಹಾಗೂ ಕೆಎಎಸ್ ಜೊತೆಗೆ ಸರ್ಕಾರಿ ಉದ್ಯೋಗದ ಪರೀಕ್ಷೆಗಳ ತರಬೇತಿ ಕೇಂದ್ರ ಪ್ರಾರಂಭಿಸುವ ಕುರಿತು ದಾವಣಗೆರೆ ಜಿಲ್ಲಾಧಿಕಾರಿಗಳಾದ ಜಿ.ಎಂ. ಗಂಗಾಧರಸ್ವಾಮಿ ಹಾಗೂ ದಾವಣಗೆರೆ ವಿವಿ ಕುಲಪತಿ ಪ್ರೊ. ಬಿ.ಡಿ. ಕುಂಬಾರ್ ಅವರೊಂದಿಗೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಮಹತ್ವದ ಚರ್ಚೆ ನಡೆಸಿದ್ದಾರೆ.


ತಮ್ಮ ಗೃಹಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಪ್ರಭಾ ಎಸ್.ಎಸ್. ಕೇರ್ ಟ್ರಸ್ಟ್ ಮೂಲಕ ಈ ಯೋಜನೆಗಳ ಕಾರ್ಯಗತಗೊಳಿಸುವ ಕುರಿತು ಅಂತಿಮ ಹಂತದ ರೂಪುರೇಷೆಗಳ ಸಿದ್ಧತೆ ಕೈಗೊಂಡಿ-ದ್ದಾರೆ. ಈ ಯೋಜನೆಗಳನ್ನು ದಾವಣಗೆರೆ ವಿಶ್ವವಿದ್ಯಾಲಯ ಹಾಗೂ ಜಿಲ್ಲಾಡಳಿತದ ಸಹಯೋಗದಲ್ಲಿ ಕಾರ್ಯಗತಗೊಳಿಸಲಾಗುತ್ತಿದೆ ಎಂದಿದ್ದಾರೆ

ಶೀಘ್ರದಲ್ಲೇ ದಾವಣಗೆರೆ ಜಿಲ್ಲೆಯ ವಿದ್ಯಾರ್ಥಿಗಳಿಗೆ ಮಹತ್ವಾಕಾಂಕ್ಷೆಯ ಎರಡು ಉಚಿತ ಯೋಜನೆಗಳು ಲಭ್ಯವಾಗಲಿವೆ ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದ್ದಾರೆ.

## ಕಿಡಿಗೇಡಿಗಳಿಂದ ಚಾಮುಂಡಿ ಬೆಟ್ಟದಲ್ಲಿ ಬೆಂಕಿ: ಕಾಡ್ಗಿಚ್ಚಿಗೆ 35 ಎಕರೆ ಅರಣ್ಯ ನಾಶ

**ಮೈಸೂರು:** ಚಾಮುಂಡಿ ಬೆಟ್ಟದಲ್ಲಿ ಶುಕ್ರವಾರ ಕಾಣಿಸಿಕೊಂಡ ಬೆಂಕಿಯಿಂದ 35 ಎಕರೆ ಕಾಡು ಸಂಪೂರ್ಣ ಸುಟ್ಟು ಹೋಗಿದೆ. ಮಾನವ ನಿರ್ಮಿತ ಬೆಂಕಿಯು ಚಾಮುಂಡಿ ಬೆಟ್ಟವನ್ನು ಆವರಿಸಿದ್ದು, ದೇವಿಕೆರೆ, ಗೊಲ್ಲಹಳ್ಳಿ ಭಾಗದಲ್ಲಿ 35 ಎಕರೆ ಕಾಡು ಸಂಪೂರ್ಣ ಸುಟ್ಟು ಹೋಗಿದೆ.

ಉದ್ದೇಶ ಪೂರ್ವಕವಾಗಿ ಬೆಂಕಿ ಹಾಕಿದ್ದಾರೆ. ಆ ಬಗ್ಗೆ ತನಿಖೆ ನಡೆ-ಯುತ್ತಿದೆ ಗಾಳಿ ವೇಗ ಹಾಗೂ ಬಿಸಿಲಿನ ವಾತಾವರಣ ಇದ್ದುದರಿಂದ ಬೆಂಕಿ ಹೆಚ್ಚಿತ್ತು ನಾವು ಎಷ್ಟೇ ಪ್ರಯತ್ನ ಪಟ್ಟರೂ ಆ ಜಾಗಕ್ಕೆ ಹೋಗಲು ಸಾಧ್ಯವಾಗಲಿಲ್ಲ. ಅಗ್ನಿಶಾಮಕ ದಳ ಹಾಗೂ ಅರಣ್ಯ ಇಲಾಖೆ ಸಿಬ್ಬಂದಿಗಳು ಬೆಂಕಿ ನಂದಿಸಲು ಶ್ರಮ ಹಾಕಿದ್ದಾರೆ. ಸದ್ಯ ಬೆಂಕಿ ನಿಯಂತ್ರಣಕ್ಕೆ ಬಂದಿದೆ ಎಂದು



ತಿಳಿಸಿದರು.

ಇಂದು ಬೆಳಿಗ್ಗೆ ಕೂಡ ಎರಡು ತಂಡ ಮಾಡಿ ಕೆಂಡ ಇದ್ರೆ ಅದನ್ನು ಆರಿಸಲು ಹೇಳಿದ್ವಿ. ಸದ್ಯಕ್ಕೆ ಡ್ರೋನ್ ಹಾರಿಸಿ ಎಲ್ಲವನ್ನೂ ಪರಿಶೀಲನೆ ಮಾಡಿದ್ದೇವೆ ಎಂದು ಹೇಳಿದರು. ಸಣ್ಣ ಕಿಡಿ ಇಡೀ ಕಾಡನ್ನೇ ನಾಶ ಮಾಡತ್ತದೆ ಹೀಗಾಗಿ ಸಾರ್ವಜನಿಕರು ಕಾಡಿನಲ್ಲಿ ಬಿಡಿ ಸಿಗರೇಟ್ ಸೇದಿ ಎಸೆಯಬೇಡಿ ಎಂದು ಮನವಿ ಅವರು ಮಾಡಿದರು.

ಅದೃಷ್ಟವಶಾತ್ ಯಾವುದೇ ಪ್ರಾಣಿಗಳಿಗೆ ಹಾನಿಯಾಗಿಲ್ಲ. ಬೆಳಿಗ್ಗೆ ನಮ್ಮ ವಾಚರ್ ಕಣ್ಣಿಗೆ ಚಿರತೆ ಹಾಗೂ ಮರಿಗಳು ಬಿದ್ದಿದೆ. ಬೆಂಕಿ ಬಿದ್ದ ತಕ್ಷಣ ಪ್ರಾಣಿಗಳು ಒಂದು ಕಡೆಯಿಂದ ಮತ್ತೊಂದು ಭಾಗಕ್ಕೆ ಹೋಗಿವೆ ಎಂದರು.

## 4 ಕೋಟಿ ವೆಚ್ಚದ ಕಾಮಗಾರಿಗಳಿಗೆ ಶಾಸಕರಿಂದ ಶಂಕುಸ್ಥಾಪನೆ

**ಜಗಳೂರು:** ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 4 ಕೋಟಿ ವೆಚ್ಚದ ಸಿಸಿ ರಸ್ತೆ, ಚರಂಡಿ ನಿರ್ಮಾಣ ಕಾಮಗಾರಿಗಳಿಗೆ ಶಾಸಕ ಬಿ. ದೇವೇಂದ್ರಪ್ಪ ಶಂಕುಸ್ಥಾಪನೆ ನೆರವೇರಿಸಿದರು.

ತಾಲ್ಲೂಕಿನ ಹೊಸಕೆರೆ, ಮಲೆಮಾಚಿಕೆರೆ ಗ್ರಾಮಗಳಲ್ಲಿ ತಲಾ 20 ಲಕ್ಷ ವೆಚ್ಚದ ಸಿಸಿ ರಸ್ತೆ, ಸಿಸಿ ಚರಂಡಿ ನಿರ್ಮಾಣ, ಸೊಕ್ಕೆ ಗ್ರಾಮದ 32 ಕಡೆ ಮನರೇಗಾದಡಿ 1 ಕೋಟಿ 83.4 ಲಕ್ಷ ವೆಚ್ಚದ ಬೂದು ನೀರು ನಿರ್ವಹಣೆಗೆ ಸಿಸಿ ಚರಂಡಿ ನಿರ್ಮಾಣ, ಮಾಗಡಿ ಗ್ರಾಮದಲ್ಲಿ 50 ಲಕ್ಷ ವೆಚ್ಚದ ಸಿಸಿ ರಸ್ತೆ, ಬಸವನಕೋಟೆ ಗ್ರಾಮದಲ್ಲಿ ಮುಖ್ಯಮಂತ್ರಿ ವಿಶೇಷ ಅನುದಾನದಲ್ಲಿ 1 ಕೋಟಿ ವೆಚ್ಚದಲ್ಲಿ ಸಿಸಿ ರಸ್ತೆ, ಚರಂಡಿ ನಿರ್ಮಾಣ ಕಾಮಗಾರಿಗಳಿಗೆ ಚಾಲನೆ ನೀಡಿದರು.



ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ, ಶಾಸಕ ಬಿ. ದೇವೇಂದ್ರಪ್ಪ ಮಾತನಾಡಿ, ಪ್ರತಿಯೊಂದು ಕಾಮಗಾರಿಗಳನ್ನು ಗುಣಮಟ್ಟದಲ್ಲಿ ನಿರ್ಮಾಣಗೊಳಿಸಲು ಗುತ್ತಿಗೆದಾರರು, ಅಧಿಕಾರಿಗಳು ಗಮನಹರಿಸಬೇಕು. ಕ್ಷೇತ್ರದ ಪ್ರತಿ ಗ್ರಾಮಗಳಲ್ಲಿ ಸಿಸಿ ರಸ್ತೆ, ಚರಂಡಿ, ಕುಡಿಯುವ ನೀರು ಸೇರಿದಂತೆ ಮೂಲಸೌಕರ್ಯಕ್ಕೆ ಆದ್ಯತೆ ನೀಡಲಾಗುವುದು. ಸಾರ್ವಜನಿಕರು ಅಭಿವೃದ್ಧಿ ಕಾಮಗಾರಿಗಳಿಗೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಶಿಥಿಲಾವಸ್ಥೆಯಲ್ಲಿರುವ ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ನೆಲಸಮಗೊಳಿಸಿ ಹೊಸಕಟ್ಟಡ ನಿರ್ಮಾಣಕ್ಕೆ ಅನುದಾನ, ಹಾಗೂ ಮರೇನಹಳ್ಳಿ ರಸ್ತೆಯಲ್ಲಿ 5 ಎಕರೆ ಸರ್ಕಾರಿ ಜಮೀನು ಗುರುತಿಸಲಾಗಿದ್ದು. ಕೆಎಸ್ ಆರ್ ಟಿಸಿ ಬಸ್ ಡಿಪೋ ಗೆ ಅನುದಾನಕ್ಕೆ ಮಾ.3 ರಿಂದ ನಡೆಯಲಿರುವ ಬಜೆಟ್ ಅಧಿವೇಶನದಲ್ಲಿ ಧ್ವನಿಯಾಗುವೆ. ಎಂದು ಭರವಸೆ ನೀಡಿದರು.

ಕೆರೆಗಳಿಗೆ ಶೀಘ್ರ ನೀರು: ಗುರುಸಿದ್ದಾಪುರ, ಮಾಗಡಿ ಕೆರೆಗಳಿಗೆ ಪೈಪ್ ಲೈನ್ ಕಾಮಗಾರಿಗೆ ಅಡ್ಡಿಯಾಗಿರುವ ಅರಣ್ಯ ಇಲಾಖೆ ಹಾಗೂ ಸರ್ಕಾರದ ಮಧ್ಯೆಯಿರುವ ಕಾನೂನು ತೊಡಕು ಸರಿಪಡಿಸಿ ಶೀಘ್ರದಲ್ಲಿ ಪೈಪ್ ಲೈನ್ ಕಾಮಗಾರಿ ಆರಂಭಿಸಿ ನೀರು ಹರಿಸಲು ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಷಂಷೀರ್ ಅಹಮ್ಮದ್, ಕೆಪಿಸಿಸಿ ಎಸ್ಟಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್, ಬಸವನಕೋಟೆ ಗ್ರಾ.ಪಂ. ಅಧ್ಯಕ್ಷೆ ಮರಿಯಮ್ಮ, ಸದಸ್ಯರಾದ ಬಸವರಾಜ್, ದೇವರಾಜ್, ಸೊ-ಕ್ಕೆ ಗ್ರಾ.ಪಂ. ಸದಸ್ಯ ರಾಜಪ್ಪ, ಮುಖಂಡರಾದ ಪಲ್ಲಾಗಟ್ಟೆ ಶೇಖರಪ್ಪ, ಬಿ. ಮಹೇಶ್ವರಪ್ಪ, ಕೊಟ್ರೇಶ್, ಗೌಸ್ ಪೀರ್, ಹರೀಶ್ ಗೌಡ, ಗಿರೀಶ್, ರಮೇಶ್, ಮಾಗಡಿ ಮಂಜಣ್ಣ, ಶಂಭುಲಿಂಗಪ್ಪ, ಸಣ್ಣಸೂರಜ್ಜ, ಗಿಡ್ಡನಕಟ್ಟೆ ಕಾಂತರಾಜ್, ಮಂಜುನಾಥ್, ಓಬಳೇಶ್, ಕೊರಟಕೆರೆ ಶಿಲ್ಪ, ಸ್ನೇಹ ಪ್ರಕಾಶ್, ಜಿ.ಪಂ. ಎಇಇ ಶಿವಮೂರ್ತಿ, ಎಇ ವಿಜಯ್ ನಾಯ್ಕ ಇನ್ನಿತರರು ಉಪಸ್ಥಿತರಿದ್ದರು.

## ಫೆ. 28 'ಚಿಗುರು ಚಿತ್ತಾರ' ಚಿತ್ರಕಲಾ ಪ್ರದರ್ಶನ ಹಾಗೂ ಪ್ರಶಸ್ತಿ ಪ್ರದಾನ




**ದಾವಣಗೆರೆ:** ದಾವಣಗೆರೆ ದೃಶ್ಯಕಲಾ ಮಹಾವಿದ್ಯಾಲಯದ ವಜ್ರ ಮಹೋತ್ಸವ ಸಂಭ್ರಮದ ನಿಮಿತ್ತ ಇದೇ ಫೆ. 28 ರಂದು 'ಚಿಗುರು ಚಿತ್ತಾರ-2025' ಚಿತ್ರಕಲಾ ಪ್ರದರ್ಶನ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಶಿಲ್ಪಕಲಾ ಅಕಾಡೆಮಿ ಸದಸ್ಯ ಮತ್ತು ಯೂನಿವರ್ಸಿಟಿ ಕಾಲೇಜ್ ಆಫ್ ವಿಜುಯಲ್ ಆರ್ಟ್ ಅಲುಮಿನಿ ಅಸೋಸಿಯೇಷನ್ ಅಧ್ಯಕ್ಷ ವೈ. ಕುಮಾರ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿಗುರು ಚಿತ್ತಾರ ಹೆಸರಿನಲ್ಲಿ ಜಿಲ್ಲೆಯ ಆರು ಶಾಲೆಗಳಲ್ಲಿ ಚಿತ್ರಕಲೆ ಮತ್ತು ಪ್ರಾತ್ಯಕ್ಷಿ-ಕೆ ಹಮ್ಮಿಕೊಂಡಿದ್ದು, ಸುಮಾರು 6,500 ಮಕ್ಕಳು ಪಾಲ್ಗೊಂಡಿದ್ದರು. ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ಮತ್ತು ಅಭಿನಂದನಾ ಪಾತ್ರವನ್ನು ಕಾರ್ಯಕ್ರಮದಲ್ಲಿ ವಿತರಿಸಲಾಗುವುದು ಎಂದರು.

ಫೆ.28 ರಂದು ಬೆಳಿಗ್ಗೆ 9.30 ನಡೆಯುವ ಕಾರ್ಯಕ್ರಮವನ್ನು ಶಿಲ್ಪಕಲಾ ಅಕಾಡೆಮಿ ಅಧ್ಯಕ್ಷ ಎಂ.ಸಿ. ರಮೇಶ್ ಉದ್ಘಾಟಿಸುವರು. ಚಿತ್ರಕಲಾ ಪ್ರದರ್ಶನವನ್ನು ಡಯಟ್ ಪ್ರಾಚಾರ್ಯೆ ಎಸ್. ಗೀತಾ ಉದ್ಘಾಟಿಸಲಿದ್ದಾರೆ. ದಾವಣಗೆರೆ ವಿಶ್ವವಿದ್ಯಾಲಯ ಕುಲಪತಿ ಡಾ. ಬಿ.ಡಿ. ಕುಂಬಾರ್ ಅಧ್ಯಕ್ಷತೆ ವಹಿಸಲಿದ್ದು, ಚಿತ್ರ ಕಲಾವಿದ ಶ್ರೀನಾಥ್ ಬಿದರೆ, **(3ನೇ ಪುಟಕ್ಕೆ)**

## ದಾವಣಗೆರೆ ಜಿಲ್ಲೆ ತೆರಿಗೆ ಪಾವತಿದಾರರ ಸಂಘ ಆರಂಭ

**ದಾವಣಗೆರೆ:** ಸಾರ್ವಜನಿಕವಾಗಿ ಸರ್ಕಾರವು ಕಾಲಕಾಲಕ್ಕೆ ವಿಧಿಸುವ ವಿವಿಧ ರೂಪದ ತೆರಿಗೆಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಉಂಟು ಮಾಡುವ ಉದ್ದೇಶದಿಂದ ದಾವಣಗೆರೆ ಜಿಲ್ಲೆ ಪಾವತಿದಾರರ ಸಂಘವನ್ನು ಅಸ್ತಿತ್ವಕ್ಕೆ ತರಲಾಗಿದೆ ಎಂದು ಸಂಘದ ಗೌರವಾಧ್ಯಕ್ಷ ಕುಸುಮ ಶೆಟ್ಟಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,




ಸರ್ಕಾರವು ಕಾಲಕಾಲಕ್ಕೆ ವಿವಿಧ ರೂಪದ ತೆರಿಗೆ ವಿಧಿಸುತ್ತದೆ. ತೆರಿಗೆ ಏರಿಕೆಯ ಬಿಸಿ ಜನಸಾಮಾನ್ಯರಿಂದ ಹಿಡಿದು ಎಲ್ಲ ವರ್ಗದವರ ಮೇಲೂ ಪ್ರಭಾವ ಬೀರುತ್ತದೆ. ತೆರಿಗೆ


ಪಾವತಿದಾರರು ತಮ್ಮ ಹಕ್ಕುಗಳಂತೆ ಕರ್ತವ್ಯವೂ ಮುಖ್ಯ ಎಂಬುದನ್ನು ಸಾರ್ವಜನಿಕರಲ್ಲಿ ಅರಿವನ್ನು ಉಂಟು ಮಾಡುವುದು ಸಂಘದ ಉದ್ದೇಶವಾಗಿರುತ್ತದೆ ಎಂದು ಹೇಳಿದರು.

# ನಗರವನ್ನು ಸುಂದರವಾಗಿಸುವ ಪೌರಕಾರ್ಮಿಕರ ಸೇವೆ ಅಮೂಲ್ಯ

**ದಾವಣಗೆರೆ:** ಪ್ರತಿನಿತ್ಯ ಸ್ವಚ್ಛತೆ ಕಾರ್ಯ ಮಾಡುವ ಪೌರಕಾರ್ಮಿಕರ ಸೇವೆ ಅನನ್ಯ. ಅವರನ್ನು ಗುರುತಿಸಿ ಕೈಯಲ್ಲಾದಷ್ಟು ಸಹಾಯ ಮಾಡುವುದು ಪುಣ್ಯದ ಕೆಲಸ ಎಂದು ಮಹಾನಗರ ಪಾಲಿಕೆಯ ವಿರೋಧ ಪಕ್ಷದ ಮಾಜಿ ನಾಯಕ ಜಿ. ಎಸ್. ಮಂಜುನಾಥ್ ಗಡಿಗುಡಾಳ್ ಹೇಳಿದರು.

ನಗರದ ಎಂಸಿಸಿ ಬಿ ಬ್ಲಾಕ್ ನಲ್ಲಿ ಪೌರಕಾರ್ಮಿಕರಿಗೆ ವಿಶೇಷ ಉಡುಗೊರೆ ನೀಡಿ ಸನ್ಮಾನಿಸಿ ಮಾತನಾಡಿದ ಅವರು, ದಾವಣಗೆರೆ ನಗರದಲ್ಲಿ ಪೌರಕಾರ್ಮಿಕರು ಇಲ್ಲ ಎಂಬುದನ್ನು ಊಹಿಸಿಕೊಳ್ಳಲು ಸಾಧ್ಯವಿಲ್ಲ. ಎಂಥ ಪರಿಸ್ಥಿತಿ ಇರಲಿ. ನಗರದ ಸ್ವಚ್ಛತೆಗೆ ಹೆಚ್ಚಿನ ಕಾಳಜಿ ವಹಿಸುವವರು. ಮಳೆ, ಗಾಳಿ, ಬಿಸಿಲು ಎನ್ನದೇ ಸ್ವಚ್ಛತಾ ಕಾರ್ಯ ಮಾಡಿ ನಗರವನ್ನು ಸುಂದರವಾಗಿಸುತ್ತಾರೆ ಎಂದು ಬಣ್ಣಿಸಿದರು.

ಕೊರೊನಾದಂಥ ಸಂಕಷ್ಟದ ವೇಳೆಯಲ್ಲಿಯೂ ಕರ್ತವ್ಯ ನಿರ್ವಹಿಸಿದ್ದಾರೆ. ಜೊತೆಗೆ ನಗರದ ಸ್ವಚ್ಛತೆ ಮಾಡಿದ್ದಾರೆ. ಭಯವಿಲ್ಲದೇ ಜನರ ಆರೋಗ್ಯದ ದೃಷ್ಟಿಯಿಂದ ತಮ್ಮ ಪ್ರಾಣವನ್ನು ಪಣಕ್ಕಿಟ್ಟು ಸ್ವಚ್ಛತಾ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದರು. ಅವರಿದ್ದರೆ ಸ್ವಚ್ಛತೆ. ಅವರನ್ನು ಗುರುತಿಸಿ ಗೌರವಿಸಿದ್ದು ಸಂತೋಷ ತಂದಿದೆ. ಅವರಿಗೂ ಖುಷಿ ಆಗಿದೆ ಎಂದು ತಿಳಿಸಿದರು.



ಪೌರಕಾರ್ಮಿಕರ ಬದುಕು ನಮ್ಮಂತೆ ನಿಮ್ಮಂತೆ ಅಲ್ಲ. ಏನೇ ಕಷ್ಟ ಇದ್ದರೂ, ಸಂಕಷ್ಟ ಎದುರಾದರೂ ತಮ್ಮ ಕರ್ತವ್ಯ ನಿರ್ವಹಿಸಿ ಎಲ್ಲಾ ವಾರ್ಡ್ ಗಳ ಸುಂದರವಾಗಿ ಕಾಣುವಂತೆ ಮಾಡುತ್ತಾರೆ. ಇಂಥವರಿಗೆ ಹೆಚ್ಚಿನ ನೆರವು ನೀಡಬೇಕಾದ ಅವಶ್ಯಕತೆ ಇದೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ, ಜಿಲ್ಲಾ ಉಸ್ತುವಾರಿ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ವಿಶೇಷ ಮುತುವರ್ಜಿ ವಹಿಸಿದ್ದಾರೆ. ಪೌರಕಾರ್ಮಿಕರಿಗೆ ಎಲ್ಲಾ ರೀತಿಯ ನೆರವು ದೊರಕಿಸಿಕೊಡಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದಾರೆ. ನಮಗೂ ಮಾರ್ಗದರ್ಶನ ನೀಡಿದ್ದಾರೆ. ಪೌರ ಕಾರ್ಮಿಕರಿಗೆ ವಸತಿ, ಚಿಕಿತ್ಸಾ ಸೌಲಭ್ಯ, ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ತಲುಪಿಸಲು ಸೂಚನೆ ನೀಡಿ ನೆರವಾಗಿದ್ದಾರೆ ಎಂದು ಮಂಜುನಾಥ್ ಶ್ಲಾಘಿಸಿದರು.

ಎಂಸಿಸಿ ಬಿ ಬ್ಲಾಕ್ ಇಷ್ಟೊಂದು ಸುಂದರವಾಗಿ ಕಾಣಲು, ಇರುವಂತೆ ಮಾಡಿರುವುದು ಪೌರಕಾರ್ಮಿಕರು. ಬೆಳಿಗ್ಗೆಯೇ ಚಳಿ ಇದ್ದರೂ, ಮಳೆ ಬಂದರೂ ಲೆಕ್ಕಿಸದೇ ಸ್ವಚ್ಛತಾ ಕಾರ್ಯದಲ್ಲಿ ತೊಡಗಿಸಿಕೊಳ್ಳುತ್ತಾರೆ. ರಸ್ತೆಗಳು ಸುಂದರವಾಗಿಸಲು ಶ್ರಮಿಸುತ್ತಾರೆ. ಇವರ ಬಗ್ಗೆ ಅನುಕಂಪ ಇದ್ದರೆ ಸಾಲದು, ಗೌರವಿಸುವ ಕೆಲಸವೂ ಹೆಚ್ಚಾಗಿ ನಡೆಯಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಡಾ. ಕರಿಬಸಪ್ಪ ಮತ್ತು ನಿರ್ಮಲಾ ದಂಪತಿಯ ಪುತ್ರಿ ಡಾ. ಚೇತನಾ ಬಳ್ಳಾರಿ ಹಾಗೂ ಡಾ. ಷಡಾಕ್ಷರಿ ಅವರ 25ನೇ ವಿವಾಹ ವಾರ್ಷಿಕೋತ್ಸವ ಸಮಾರಂಭದ ಪ್ರಯುಕ್ತ ಪೌರ ಕಾರ್ಮಿಕರಿಗೆ ಕೊಡುಗೆ ನೀಡಿದರು. ಇದೇ ವೇಳೆ ಗಡಿಗುಡಾಳ್ ಮಂಜುನಾಥ್ ಅವರು ತಮ್ಮ ಕೈಯಲ್ಲಾದ ಸಹಾಯ ಮಾಡಿದರು.

ಈ ವೇಳೆ ಮಾತನಾಡಿದ ಪೌರ ಕಾರ್ಮಿಕರು, ನಾವು ಈ ವಾರ್ಡ್ ನಲ್ಲಿ ಕೆಲಸ ಮಾಡುತ್ತಿರುವುದು ಪುಣ್ಯ ಎನಿಸಿದೆ. ಪಾಲಿಕೆ ಸದಸ್ಯರಾಗಿದ್ದ ಐದು ವರ್ಷಗಳ ಅವಧಿಯಲ್ಲಿಯೂ ತಮ್ಮ ಕೈಯಲ್ಲಾದಷ್ಟು ಸಹಾಯ ಮಾಡುವ ಮಾದರಿ ಕಾರ್ಪೊರೇಟರ್ ಆಗಿ ಮಂಜುನಾಥ್ ಅಣ್ಣನವರು ನಿಂತಿದ್ದಾರೆ. ಅವರಂಥ ಜನಪ್ರತಿನಿಧಿ ಬೇಕು. ಜನರು ಇಂಥ ಜನಸೇವಕ ಮತ್ತು ಜನಪರ ಕಾಳಜಿಯುಳ್ಳ, ಮಾನವೀಯ ಗುಣವುಳ್ಳ ಜನಪ್ರತಿನಿಧಿಗಳನ್ನು ಮರೆಯಬಾರದು. ಸೇವೆಯನ್ನು ಗುರುತಿಸಿ, ಅವರನ್ನೂ ಗೌರವಿಸುವಂತಾಗಬೇಕು ಎಂದು ಹೇಳಿದರು. ಪೌರಕಾರ್ಮಿಕರು ಜಿ. ಎಸ್. ಮಂಜುನಾಥ್ ಗಡಿಗುಡಾಳ್ ಅವರನ್ನು ಸನ್ಮಾನಿಸಿ ಕೃತಜ್ಞತೆ ಸಲ್ಲಿಸಿದರು.

## ಆಸ್ತಿ ಮಾಲೀಕರ ಸ್ವತ್ತಿನ ದಾಖಲೆ ಸೃಜಿಸಲು ನಕ್ಷಾ ಯೋಜನೆ ಸಹಕಾರಿಶಿ

**ಶಿವಮೊಗ್ಗ:** ನಗರ ಮತ್ತು ಪಟ್ಟಣ ಪ್ರದೇಶದಲ್ಲಿನ ಸಾರ್ವಜನಿಕರ ಅಸ್ತಿಗಳ ಭೂ ಮಾಲೀಕತ್ವದ ಕುರಿತು ಪ್ರತಿಯೊಬ್ಬ ನಾಗರಿಕರಿಗೆ ಸರ್ಕಾರದಿಂದಲೇ ಅಸ್ತಿಯ ಮಾಲೀಕತ್ವ ಪ್ರಮಾಣ ಪತ್ರವನ್ನು ಒದಗಿಸಿ ಕಾನೂನಾತ್ಮಕ ಸ್ಪಷ್ಟತೆ ಒದಗಿಸುವುದರ ಜೊತೆಗೆ ವಿವಾದಗಳನ್ನು ಪರಿಹರಿಸಿ ಅತಿಕ್ರಮಣಗಳನ್ನು ತಡೆಯಲು ನಕ್ಷಾ ಯೋಜನೆ ಸಹಕಾರಿಯಾಗಲಿದೆ ಎಂದು ರಾಜ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧು ಬಂಗಾರಪ್ಪ ಹೇಳಿದರು.

ಸೊರಬ ತಾಲ್ಲೂಕು ಆನವಟ್ಟಿಯ ಪಟ್ಟಣ ಪಂಚಾಯಿತಿ ಆವರಣದಲ್ಲಿ ಕಂದಾಯ ಇಲಾಖೆ, ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ, ಹಾಗೂ ಪೌರಾಡಳಿತ ಇಲಾಖೆಯ ಸಹಯೋಗದಲ್ಲಿ ನಗರದ ಆಸ್ತಿ ಮಾಲೀಕರಿಗೆ ಸರ್ಕಾರದ ವತಿಯಿಂದಲೇ ಸರ್ವೇ ನಡೆಸಿ, ದಾಖಲೆಗಳನ್ನು ಸೃಜಿಸಿ, ಉಚಿತವಾಗಿ ನೀಡುವ ನಕ್ಷಾಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ರಾಜ್ಯ ಸರ್ಕಾರವು ಇದೇ ಮೊದಲ ಬಾರಿಗೆ ರಾಜ್ಯದ ಹತ್ತು ಜಿಲ್ಲೆಗಳ ಆಯ್ದ ಹತ್ತು ಪ್ರದೇಶಗಳಲ್ಲಿ ಈ ಯೋಜನೆಯನ್ನು ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ಉದ್ದೇಶಿಸಿದ್ದು, ಶಿವಮೊಗ್ಗ ಜಿಲ್ಲೆಯ ಅನವಟ್ಟಿಯನ್ನು ಆಯ್ಕೆ ಮಾಡಿಕೊಂಡಿದೆ. ಮುಂದಿನ ದಿನಗಳಲ್ಲಿ ಈ ಯೋಜನೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳ ನಗರ, ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಿಗೂ ವಿಸ್ತರಿಸಲಾಗುವುದು ಎಂದರು. ಅಸ್ತಿಗಳ ಮಾಲೀಕರು ತಮ್ಮ ಅಸ್ತಿ ಹಕ್ಕುಗಳಿಗೆ ಮೂಲ ದಾಖಲೆಯಾಗಿ ಈ ದಾಖಲೆಯನ್ನು ಪರಿಗಣಿಸಬಹುದಾಗಿದೆ ಅಲ್ಲದೆ ಮಾಲೀಕತ್ವವನ್ನು ಕಾನೂನಾತ್ಮಕರಾಗಿ ಹಾಗೂ ದಾಖಲೆಗಳ ಮೂಲಕ ಖಚಿತಪಡಿಸಿ ಕೊಳ್ಳಬಹುದಾಗಿದೆ ಎಂದರು. ಭೂದಾಖಲೆಗಳ ಕಾಲೋಚಿತ ಗೊಳಿಸುವಿಕೆಯಿಂದ ಪರಿಣಾಮಕಾರಿಯಾಗಿ ನಗರ ಯೋಜನೆಯನ್ನು ಸುಗಮಗೊಳಿಸಲು ಸಾಧ್ಯವಾಗಲಿದೆ. ಸ್ಥಳೀಯ ಪ್ರಾಧಿಕಾರಿಗಳು ಸಾರ್ವಜನಿಕರಿಗೆ ಮೂಲ ಸೌಕರ್ಯಗಳನ್ನು ಒದಗಿಸಲು ಮತ್ತು ವಲಯ ನಿಯಮಾವಳಿಗಳನ್ನು ಜಾರಿಗೆ ತರಲು ಅನುವು ಮಾಡಿಕೊಡುವಲ್ಲಿ ಅನುಕೂಲವಾಗಲಿದೆ ಎಂದರು. ಭೂಮಿಯ ಬಳಕೆಯ ವಿವರಗಳನ್ನು ನಿರ್ಣಯಿಸಿ, ವಸತಿ, ಸಾರಿಗೆ ಮತ್ತು ಇತರೆ ಸೇವೆಗಳನ್ನು ಒದಗಿಸುವಲ್ಲಿ ನಕ್ಷಾ ಸಹಾಯಕವಾಗಲಿದೆ ಅಲ್ಲದೆ ಆಸ್ತಿ ಮೌಲ್ಯಗಳನ್ನು ನಿರ್ಣಯಿಸಲು, ತೆರಿಗೆಗಳನ್ನು ನ್ಯಾಯಯುತವಾಗಿ ವಿಧಿಸಲು ಮತ್ತು ಪರಿಣಾಮಕಾರಿಯಾಗಿ ಸಂಗ್ರಹಿಸಲು ಸಹಕಾರಿಯಾಗುವ ನಿರೀಕ್ಷೆ ಇದೆ ಎಂದರು. ಹೂಡಿಕೆದಾರರಿಗೆ ಭೂಮಿಯ ಮಾಲೀಕತ್ವದ ನಿಖರತೆಯಿಂದ ಭೂಮಿಯ ಬಳಕೆಯನ್ನು ಹೆಚ್ಚಿನ ರೀತಿಯಲ್ಲಿ ಉತ್ತಮವಾಗಿ ಬಳಸಲು ಸಹಾಯಕವಾಗಲಿದೆ ಎಂದರು. ವಿಶೇಷವಾಗಿ ಸರ್ಕಾರಿ ಶಾಲೆ ಸೇರಿದಂತೆ ವಿವಿಧ ಇಲಾಖೆಗಳ ಅಸ್ತಿಯನ್ನು ಗುರುತಿಸಿ, ಸಂರಕ್ಷಣೆ ಮಾಡಲು ಅನುಕೂಲವಾಗಲಿದೆ. ಅಲ್ಲದೆ ಜನರು ಅನಗತ್ಯವಾಗಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿದಂತಾಗಲಿದೆ, ಎಂದ ಅವರು ಸೊರಬ ತಾಲೂಕಿನಲ್ಲಿ ಸುಮಾರು 75ಲಕ್ಷ ಅಸ್ತಿಗಳಿದ್ದು, ಮುಂದಿನ ಆರು ತಿಂಗಳೊಳಗಾಗಿ ದಾಖಲೆಗಳನ್ನು ಸೃಜಿಸುವ ಕಾರ್ಯ ಪೂರ್ಣಗೊಳ್ಳುವ ನಿರೀಕ್ಷೆ ಇದೆ ಎಂದರು. ಇದೆ ಸಂದರ್ಭದಲ್ಲಿ ಉಪಹಾರದೊಂದಿಗೆ ಪೌರಕಾರ್ಮಿಕರ ಅಹವಾಲುಗಳನ್ನು ಆಲಿಸಿದರು. ಈ ಸಂದರ್ಭದಲ್ಲಿ ಸಾಗರ ಉಪವಿಭಾಗಾಧಿಕಾರಿ ಯತೀಶ್, ಭೂ ಮಾಪನ ಇಲಾಖೆಯ ಉಪನಿರ್ದೇಶಕ ಪಿ. ಶ್ರೀನಿವಾಸ್, ಸರ್ವೇ ಆಫ್ ಇಂಡಿಯಾದ ಪ್ರತಿನಿಧಿ ರಮೇಶ್, ಶ್ರೀಮತಿ ಮಂಜುಳಾ ಹೆಗಡಾಳ್, ಸಂತೋಷಕುಮಾರ್‌ ಸೇರಿದಂತೆ ಕಂದಾಯ ಇಲಾಖೆಯ ಅಧಿಕಾರಿಗಳು, ಪೌರಸೇವಾ ಕಾರ್ಮಿಕರು, ಸಾರ್ವಜನಿಕರು ಉಪಸ್ಥಿತರಿದ್ದರು.

## ಸ್ವಚ್ಛತಾ ಕಾರ್ಯಕ್ಕೆ ಮನವಿ

**ಮೂಡಿಗೆರೆ:** ಪಟ್ಟಣದ 4ನೇ ವಾರ್ಡ್‌ನ ನೆಹರೂ ರಸ್ತೆಯಲ್ಲಿ ಒಳಚರಂಡಿ ಕಟ್ಟಿಕೊಂಡಿದ್ದು, ದುರ್ನಾತ ಬೀರುತ್ತಿದೆ. ಕೂಡಲೇ ಇಲ್ಲಿ ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕು ಎಂದು ಷಣ್ಮುಖಾನಂದ ಬಂಡಾರಿ ಹಾಗೂ ಬಳೆ ರಮೇಶ್ ಶೆಟ್ಟಿ ಪಟ್ಟಣ ಪಂಚಾಯಿತಿ ಅಧ್ಯಕ್ಷ ಹೊಸ್ಕೆರೆ ರಮೇಶ್‌ಗೆ ಮನವಿ ಸಲ್ಲಿಸಿದರು. ಈ ರಸ್ತೆಯಲ್ಲಿ ಡಿಸಿಸಿ ಬ್ಯಾಂಕ್, ಮಹಿಳಾ ಕಾಲೇಜು, ಟಿಎಪಿಸಿಎಂಎಸ್ ಕಚೇರಿ, ಹಳೇಮೂಡಿಗೆರೆ ಸಹಕಾರ ಸಂಘ ಸೇರಿದಂತೆ ಹಲವು ಸರ್ಕಾರಿ ಕಚೇರಿಗಳಿದ್ದು, ಇಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿ ದುರ್ವಾಸನೆಯಿಂದ ಮೂಗುಮುಚ್ಚಿಕೊಂಡು ಓಡಾಡುವ ಸ್ಥಿತಿ ನಿರ್ಮಾಣವಾಗಿದೆ. ಚರಂಡಿಯ ಇಕ್ಕೆಲಗಳಲ್ಲಿ ಮನೆಗಳಿದ್ದು, ಚರಂಡಿ ಕಟ್ಟಿಕೊಂಡಿರುವುದರಿಂದ ಸೊಳ್ಳೆಗಳ ಹಾವಳಿ ಹೆಚ್ಚಿದ್ದು, ಸ್ಥಳೀಯರಿಗೆ ಅನಾರೋಗ್ಯ ಭೀತಿ ಕಾಡುತ್ತಿದೆ. ಕೂಡಲೇ ಒಳಚರಂಡಿಯನ್ನು ಸ್ವಚ್ಛಗೊಳಿಸಬೇಕು ಎಂದು ಒತ್ತಾಯಿಸಿದರು.

## ಪ್ರಶಸ್ತಿ ಪ್ರದಾನ

(1ನೇ ಪುಟದಿಂದ)

ಮಹಾವಿದ್ಯಾಲಯ ಪ್ರಾಚಾರ್ಯ ಡಾ. ಜೈರಾಜ್ ಚಿಕ್ಕಪಾಟೀಲ್, ಡಾ. ಸತೀಶ್ ಕುಮಾರ್ ವಲ್ಲೇಪುರೆ ಇನ್ನಿತರ ಗಣ್ಯರು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

ಇತ್ತೀಚಿನ ವರ್ಷಗಳಲ್ಲಿ ಕಲೆಯ ಬಗ್ಗೆ ಆಸಕ್ತಿ ಕಡಿಮೆ ಆಗುತ್ತಿದೆ. ಶಾಲಾ ವಿದ್ಯಾರ್ಥಿಗಳಲ್ಲಿ ಕಲೆಯ ಬಗ್ಗೆ ಆಸಕ್ತಿ, ಅಭಿರುಚಿ ಮೂಡಿಸುವ ಉದ್ದೇಶದಿಂದ ಶಾಲೆಗಳಲ್ಲೇ ಚಿತ್ರಕಲೆ ಮತ್ತು ಪ್ರಾತ್ಯಕ್ಷಿಕೆ ಜೊತೆಗೆ ಸ್ಪರ್ಧೆ ನಡೆಸಲಾಗಿದೆ. ಶಾಲೆಯ ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಅಸೋಸಿಯೇಷನ್ ನ ಚಂದ್ರಶೇಖರ ಎಸ್. ಸಂಗಾ, ಎಂ. ರಾಮು, ಎನ್. ಪ್ರಶಾಂತ್, ವಿನಯ್ ಸೊನ್ನದ್, ರಾಘವೇಂದ್ರ ನಾಯಕ, ಅತೀಕ್ ವುಲ್ಲಾ, ಬಿ. ಅಚ್ಯುತಾನಂದ ಇನ್ನಿತರರು ಉಪಸ್ಥಿತರಿದ್ದರು.



# ನಿವಾಸಿಗಳ ಬದುಕು ನರಕ!

ಹರಿಹರ: ನಗರಸಭೆ ವ್ಯಾಪ್ತಿಯ 10ನೇ ವಾರ್ಡ್‌ನ ಭಾರತ್ ಆಯಿಲ್ ಮಿಲ್ ಕಾಂಪೌಂಡ್‌ನ ಕೊಳಚೆ ಪ್ರದೇಶದಲ್ಲಿ ವಾಸಿಸುವ ನಿವಾಸಿಗಳ ಬದುಕು ನರಕಯಾತನೆ.

ನಗರದ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ನಗರಸಭೆಯ ಪೂರ್ವ ಭಾಗದ ಕಾಂಪೌಂಡ್ ಗೋಡೆಗೆ, ಅಮರಾವತಿ ರೈಲ್ವೆ ಗೇಟ್, ಡಿ.ಬಿ.ಕೆರೆ ನೀರಾವರಿ ಚಾನಲ್, (ಹಳೆ ಪಿ.ಬಿ.ರಸ್ತೆ) ಬಿರೂರು–ಸಮ್ಮಸಗಿ ರಾಜ್ಯ ಹೆದ್ದಾರಿಗೆ ಹೊಂದಿಕೊಂಡಿರುವ ಈ ಪ್ರದೇಶ ಕೊಳಚೆ ಪ್ರದೇಶವಾಗಿದ್ದು, ಇಲ್ಲಿ ಹೆಚ್ಚಾಗಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತ, ಹಿಂದುಳಿದ ವರ್ಗದ ಬಡ ಜನರು ವಾಸಿಸುತ್ತಿದ್ದಾರೆ.

ಈ ಪ್ರದೇಶವು ಎರೆ ಮಣ್ಣಿನ ತಗ್ಗು ಭೂಮಿಯಾಗಿದ್ದು, ಮಳೆಗಾಲ ಬಂತೆಂದರೆ ನಗರದ ಸುಮಾರು 40 ಎಕರೆ ವಿಸ್ತೀರ್ಣದ ಪ್ರದೇಶದಲ್ಲಿ ಬಿದ್ದ ಮಳೆಯ ನೀರೆಲ್ಲಾ ಬಂದು ಈ ವಾರ್ಡ್‌ನಲ್ಲಿ ಗೋಚರಿಸುತ್ತಿರುವ ಗುಂಡಿಗಳಲ್ಲಿ ಸೇರುತ್ತದೆ. ಮಳೆಗಾಲದಲ್ಲಿ ಸಂಗ್ರಹಿಸುವ ಮಳೆಯ ನೀರು ಹಾಗೂ ಸಾರ್ವಜನಿಕರು ತಮ್ಮ ಮನೆಗಳಲ್ಲಿ ಬಳಸಿದ ನೀರು ಸಹ ಇಲ್ಲಿನ ಗುಂಡಿಗಳಲ್ಲಿ ಸಂಗ್ರಹಗೊಂಡಿದ್ದು, ಮುಂದೆ ಹರಿದು ಹೋಗದಿರುವ ಕಾರಣವಲ್ಲದೇ, ಸ್ಥಳೀಯ ನಗರಸಭೆಯು ಈ ಪ್ರದೇಶವನ್ನು ಅಭಿವೃದ್ಧಿಪಡಿಸುವಲ್ಲಿ ವಿಫಲಗೊಂಡಿರುವ ಕಾರಣ ಕೊಳಚೆ ಪ್ರದೇಶವಾಗಿ ಮಾರ್ಪಟ್ಟಿದೆ ಎಂದು ಇಲ್ಲಿನ ವಾಸಿಗಳ ಗಂಭೀರ ಆರೋಪ.

**ಜನಪ್ರತಿನಿಧಿಗಳೇ ಒಮ್ಮೆ ಭೇಟಿ ನೀಡಿ:** ಕಳೆದ 60 ವರ್ಷಗಳಿಂದ ನಗರಸಭೆ, ಲೋಕಸಭೆ, ವಿಧಾನಸಭೆ ಚುನಾವಣೆಗಳ ಸಮಯದಲ್ಲಿ ಮತ ಬೇಡುವುದಕ್ಕಾಗಿ ಬಂದಿದ್ದ ಅಭ್ಯರ್ಥಿಗಳು, ನಮಗೆ ಮತ ನೀಡಿ ಆಯ್ಕೆ ಮಾಡಿರಿ, ನಾವು ಆರಿಸಿ ಬಂದಲ್ಲಿ ನಿಮ್ಮ ಪ್ರದೇಶವನ್ನು ಸಂಪೂರ್ಣ ಅಭಿವೃದ್ಧಿಪಡಿಸುತ್ತೇವೆ ಎಂಬ ಆಶ್ವಾಸನೆಗಳನ್ನು ನೀಡಿ ಮತ ಪಡೆದು ಹೋದವರು, ಆಯ್ಕೆಯಾದ ನಂತರ ಮರಳಿ ಇಲ್ಲಿಗೆ ಯಾರೂ ಬಂದಿಲ್ಲ.

ಸ್ಥಳೀಯ ನಗರಸಭೆ ಅಧಿಕಾರಿಗಳು, ತಾಲೂಕು ಆಡಳಿತಾಧಿಕಾರಿಗಳು ಭೇಟಿ ನೀಡದಿರುವ ಕಾರಣ ನಾವು ವಾಸಿಸುವ ಈ ಪ್ರದೇಶವು, ಗಬ್ಬೆದ್ದು ನಾರುತ್ತಿದ್ದು. ನರಕಯಾತನೆ ಅನುಭವಿಸುತ್ತಿದ್ದೇವೆ. ಜಿಲ್ಲಾಧಿಕಾರಿಗಳೇ, ಜನಪ್ರತಿನಿಧಿಗಳು ನಮ್ಮ ಓಣಿಗೆ ಭೇಟಿ ನೀಡಿ ಸಮಸ್ಯೆಗಳಿಗೆ ಪರಿಹಾರ ನೀಡಬೇಕೆಂದು ಕೊಳಚೆ ಪ್ರದೇಶದ ನಿವಾಸಿಗಳಾದ ಅನ್ನಪೂರ್ಣಮ್ಮ, ಕವಿತಾ ಎಂ.ಕೆ.ನೀಲಮ್ಮ, ಅಕ್ಕಮ್ಮ, ಗೀತಮ್ಮ, ಮಂಜುಳಮ್ಮ ತಮ್ಮ ಅಳಲು ತೋಡಿಕೊಂಡಿದ್ದಾರೆ.





**ಹಕ್ಕುಪತ್ರ ನೀಡಿಲ್ಲ ಆರೋಪ:** ರಾಜ್ಯ ಕೊಳಚೆ ಪ್ರದೇಶಗಳ ನಿರ್ಮೂಲನಾ ಮಂಡಳಿ ಹಾಗೂ ಸ್ಥಳೀಯ ನಗರಸಭೆಯ 10ನೇ ವಾರ್ಡ್‌ನ ವ್ಯಾಪ್ತಿಗೊಳಪಟ್ಟಿರುವ ಈ ಪ್ರದೇಶದಲ್ಲಿ ಸುಮಾರು 130ಕ್ಕೂ ಅಧಿಕ ಕುಟುಂಬಗಳು ಚಿಕ್ಕ ಚಿಕ್ಕ ಮನೆಗಳಲ್ಲಿ ವಾಸಿಸುತ್ತಿದ್ದಾರೆ. ಕಳೆದ ಸುಮಾರು 60 ವರ್ಷಗಳಿಂದ ವಾಸಿಸುವ ಇಲ್ಲಿನ ನಿವಾಸಿಗಳಿಗೆ ಇಲ್ಲಿಯವರೆಗೂ ಹಕ್ಕುಪತ್ರ ನೀಡಿಲ್ಲ.

ಸುಮಾರು 10 ರಿಂದ 15 ಅಡಿ ಉದ್ದಗಲ–ಅಳತೆಯ ಒಂದೊಂದು ಮನೆಯಲ್ಲಿ 7 ರಿಂದ 8 ಜನರು ವಾಸಿಸುತ್ತಿದ್ದಾರೆ.

ಮೂಲಭೂತ ಸೌಲಭ್ಯಗಳಿಂದ ವಂಚಿತಗೊಂಡಿರುವ ಈ ಪ್ರದೇಶದ ಮನೆಗಳಲ್ಲಿ ವಾಸಿಸುವ ಎಲ್ಲಾ ಬಡವರು ರಾಜ್ಯ ಚುನಾವಣಾ ಆಯೋಗದ ಮತ ಚೀಟಿ, ಆಧಾರ್ ಕಾರ್ಡು, ರಾಜ್ಯ ಆಹಾರ ನಾಗರಿಕ ಸರಬರಾಜು ಇಲಾಖೆಯ ಪಡಿತರ ಚೀಟಿ ಹೊಂದಿದ್ದಾರೆ. ಇಲ್ಲಿನ ಬಡವರ ಅನೇಕ ಮಕ್ಕಳು ಎಸ್ಸೆಸ್ಸೆಲ್ಸಿ, ಪಿಯುಸಿ ಹಾಗೂ ಉನ್ನತ ಶಿಕ್ಷಣ ಪಡೆದವರಾಗಿದ್ದಾರೆ. ಇವರೆಲ್ಲಾ ಆರ್ಥಿಕವಾಗಿ ಪ್ರಗತಿ ಸಾಧಿಸಲು, ಬ್ಯಾಂಕ್ ಮತ್ತಿತರೆ ಹಣಕಾಸು ಸಂಸ್ಥೆಗಳಿಂದ ಸಾಲ ಸೌಲಭ್ಯ ಪಡೆದು ಅಭಿವೃದ್ಧಿ ಹೊಂದಲು ಇವರು ವಾಸಿಸುವ ಮನೆಗಳು ಇವರ ಹೆಸರಿನಲ್ಲಿ ಇಲ್ಲ. ಕೂಡಲೇ ಎಲ್ಲಾ ಬಡವರಿಗೆ ಸರ್ಕಾರ, ಜಿಲ್ಲಾಡಳಿತ ಹಕ್ಕುಪತ್ರ ನೀಡಬೇಕೆಂದು ನಿವಾಸಿ, ಸಾಮಾಜಿಕ ಹೋರಾಟಗಾರರಾದ ಎಚ್.ಕೆ.ಮೂರ್ತಿ, ಕೆ. ಹನುಮಂತಪ್ಪ ಆಗ್ರಹಿಸಿದ್ದಾರೆ.

### ಅವೈಜ್ಞಾನಿಕ ಚರಂಡಿ ನಿರ್ಮಾಣ

ಸ್ಥಳೀಯ ನಗರಸಭೆ ಅಮೃತ ನಗರೊತ್ಥಾನ ಯೋಜನೆ ಅಡಿಯಲ್ಲಿ ಈ ಪ್ರದೇಶದಲ್ಲಿನ ಓಣಿಗಳಲ್ಲಿ ಚರಂಡಿಗಳನ್ನು ನಿರ್ಮಿಸಿದ್ದಾರೆ. ಅವೈಜ್ಞಾನಿಕ ಕಾಮಗಾರಿಯಿಂದ ಚರಂಡಿಗಳ ನೀರು ಹರಿದು ನೇರ ರಾಜಕಾಲುವೆ ಸೇರುತ್ತಿಲ್ಲ. ಇದರಿಂದ ಚರಂಡಿಗಳು ತುಂಬಿ ಗಬ್ಬೆದ್ದು ನಾರುತ್ತಿವೆ. ಕಾಮಗಾರಿ ನಿರ್ವಹಿಸಿರುವ ಗುತ್ತಿಗೆದಾರರು ಸರಿಯಾಗಿ ನಿರ್ವಹಿಸದೆ, ಸ್ಲಾಬ್ ಹಾಕದೆ ಇರುವುದರಿಂದ, ಚರಂಡಿಯ ಸುತ್ತಮುತ್ತ ಗಿಡ ಗಂಟೆಗಳು ಬೆಳೆದಿವೆ. ವಿಷಜಂತುಗಳ, ಸೊಳ್ಳೆಗಳ ಉತ್ಪತ್ತಿಯ ತಾಣವಾಗಿದೆ ಎಂದು ನಿವಾಸಿಗಳು ಆರೋಪಿಸಿದ್ದಾರೆ.



## ಲಕ್ಷ್ಮೀನಾರಾಯಣ ನಾಗವಾರರ ಹೆಜ್ಜೆ ಗುರುತು ನುಡಿನಮನ ಕಾರ್ಯಕ್ರಮ

**ಹೊಸನಗರ:** ಹುಟ್ಟು ಹೋರಾಟಗಾರ ದಲಿತ ಚಳವಳಿಯ ಹಾದಿಯಲ್ಲಿ ಲಕ್ಷ್ಮೀನಾರಾಯಣರ ಹೆಜ್ಜೆ ಗುರುತು ಕಾರ್ಯಕ್ರಮವನ್ನು ಫೆ. 26ರಂದು ಬುಧ ವಾರ ಇಲ್ಲಿನ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ಏರ್ಪಡಿಸ ಲಾಗಿದೆ ಎಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಸಂಚಾಲಕ ಅರಳಿಸುರಳಿ ನಾಗರಾಜ್‌ರವರು ತಿಳಿಸಿದರು.ಗಂಗನಕೊಪ್ಪ ಕಾರ್ಯಕರ್ತ ಹರೀಶ್‌ರವರ ಮನೆಯ ಆವರಣದಲ್ಲಿ ಈ ಸಂಬಂಧ ನಡೆದ ದಲಿತ ಸಂಘರ್ಷ ಸಮಿತಿಯ ಕಾರ್ಯಕರ್ತರ ಪೂರ್ವ ಭಾವಿ ಸಭೆಯಲ್ಲಿ ಮಾತನಾಡಿದರು.ನಾಗವಾರ ಅವರು ದಲಿತ ಚಳವಳಿಯ ಸಂಸ್ಥಾಪಕರಾದ ಪ್ರೊ. ಬಿ. ಕೃಷ್ಣಪ್ಪ, ದಲಿತ ಕವಿ ಡಾ॥ ಸಿದ್ಧಲಿಂಗಯ್ಯ, ಸಾಹಿತಿ ದೇವನೂರು ಮಹದೇವ ಹಾಗೂ ಬಿ.ಬಸವಲಿಂಗಪ್ಪ ಹೀಗೆ ಹಲವಾರು ಸಾಹಿತಿಗಳು, ಚಿಂತಕರು ಮತ್ತು ಪ್ರಗತಿ ಪರರ ಮಾರ್ಗದಶನದಲ್ಲಿ ದಲಿತ ವಿದ್ಯಾರ್ಥಿ ಒಕ್ಕೂಟದಲ್ಲಿ ಗುರುತಿಸಿ ಕೊಂಡು ರಾಜ್ಯದ ಮೂಲೆ-ಮೂಲೆಗಳಲ್ಲಿ ವಿದ್ಯಾರ್ಥಿಗಳನ್ನು ಸಂಘಟಿಸಿ, ಸಂಘಟನಾ ಚತುರನಾಗಿ ಹೊರಹೊಮ್ಮಿದರು ಎಂದರು.ಪೂರ್ವಭಾವಿ ಕಾರ್ಯಕ್ರಮದಲ್ಲಿ ಜಿಲ್ಲಾ ಸಂಚಾಲಕ ಕೆ.ವಿ.ನಾಗರಾಜ್, ತಾಲ್ಲೂಕು ಸಂಚಾಲಕರಾದ ಪ್ರಕಾಶ್ ಬಿ.ಎಂ., ಸಂಘಟನಾ ಸಂಚಾಲಕರಾದ ಹರೀಶ್ ಎ., ಪದಾಧಿಕಾರಿಗಳಾದ ಸುಬ್ರಹ್ಮಣ್ಯ,ಗಂಗನಕೊಪ್ಪ, ನಾರಾಯಣ, ಸುರೇಶ, ನಾಗೇಶ್, ಮಹಾಲಕ್ಷ್ಮೀ ರತ್ನಮ್ಮ, ಗಿರೀಜ ಮುಂತಾದವರು ಉಪ ಸ್ಥಿತರಿದ್ದರು.

## 15 ಕೆಎಫ್‌ಡಿ ಪ್ರಕರಣ ಪತ್ತೆ

**ತೀರ್ಥಹಳ್ಳಿ:** ತಾಲೂಕಿನಲ್ಲಿ ಪ್ರಸಕ್ತ ಸಾಲಿನಲ್ಲಿ 15 ಕೆಎಫ್‌ಡಿ ಪ್ರಕರಣಗಳು ದಾಖಲಾಗಿವೆ. ಹೆದ್ದೂರು ಪಂಚಾಯತ್ ವ್ಯಾಪ್ತಿಯಲ್ಲಿಯೇ 12 ಪ್ರಕರಣ ದಾಖಲಾಗಿದ್ದು ಆರೋಗ್ಯ ಇಲಾಖೆಯ ಸಿಬ್ಬಂದಿ ಪ್ರತ್ಯೇಕ ಕೇಂದ್ರವನ್ನು ತೆರೆದು ಸ್ಥಳದಲ್ಲಿ ಮೊಕ್ಕಾಂ ಹೂಡಿದ್ದಾರೆ. ಗ್ರಾಮಸ್ಥರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಕ್ಕೂ ಇಲಾಖೆ ಮುಂದಾಗಿದೆ. ಇತ್ತೀಚೆಗೆ ತ್ರ್ಯಯಂಬಕಪುರದಲ್ಲಿ ಮಹಿಳೆಯೋರ್ವರಲ್ಲಿ ಕೆಎಫ್‌ಡಿ ಪತ್ತೆಯಾಗಿದೆ. ಇವರು ಹರಪನಹಳ್ಳಿಯವರಾಗಿದ್ದು ಕೆಲಸದ ನಿಮಿತ್ತ ಬಂದಿದ್ದರು ಎನ್ನಲಾಗಿದೆ. ಅವರು ಪುನಃ ಊರಿಗೆ ತೆರಳಿರುವ ಹಿನ್ನಲೆಯಲ್ಲಿ ಅವರನ್ನು ಆಸ್ಪತ್ರೆಗೆ ದಾಖಲಾಗುವಂತೆ ಸೂಚಿಸಲಾಗಿದೆ. ಮೂವರು ಮಣಿಪಾಲ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಇಬ್ಬರು ಜೆಸಿ ಆಸ್ಪತ್ರೆಯಿಂದ ಗುಣಮುಖರಾಗಿ ಹಿಂತಿರುಗಿದ್ದಾರೆ.

## ಕುಂಭಮೇಳಕ್ಕೆ ಶಿವಮೊಗ್ಗದಿಂದ ವಿಶೇಷ ರೈಲು

**ಶಿವಮೊಗ್ಗ:** ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಕುಂಭ ಮೇಳಕ್ಕೆ ಶಿವಮೊಗ್ಗ ನಗರದಿಂದ ಬನಾರಸ್ ನಡುವೆ, ವಿಶೇಷ ರೈಲು ಸಂಚಾರಕ್ಕೆ ಅವಕಾಶ ಕಲ್ಪಿಸಲಾಗಿದೆ.ಫೆ. 22ರ ಶನಿವಾರ 06223 ಸಂಖ್ಯೆಯ ವಿಶೇಷ ರೈಲು, ಶಿವಮೊಗ್ಗದಿಂದ ಬನಾರಸ್‌ಗೆ ಪ್ರಯಾಣ ಬೆಳೆಸಲಿದೆ. ಹಾಗೆಯೇ 06224 ಸಂಖ್ಯೆಯ ರೈಲು, ಫೆ. 25ರ ಮಂಗಳವಾರ ಬನಾರಸ್‌ನಿಂದ ಶಿವಮೊಗ್ಗಕ್ಕೆ ಹಿಂದಿರುಗಲಿದೆ.ಪ್ರಯಾಣದ ವೇಳಾಪಟ್ಟಿ: ಫೆ. 22ರಂದು ಸಂಜೆ 4.40 ನಿಮಿಷಕ್ಕೆ ಶಿವಮೊಗ್ಗದಿಂದ ರೈಲು ಹೊರಡಲಿದೆ. 5 ಗಂಟೆಗೆ ಭದ್ರಾವತಿ ನಿಲ್ದಾಣ ಹಾಗೂ ಸಂಜೆ 6.10ಕ್ಕೆ ಬೀರೂರು ನಿಲ್ದಾಣಕ್ಕೆ ಆಗಮಿಸಲಿದೆ. ನಂತರ ಚಿಕ್ಕಜಾಜೂರು, ಚಿತ್ರದುರ್ಗ, ರಾಯದುರ್ಗ, ಬಳ್ಳಾರಿ, ಹೊಸಪೇಟೆ, ಕೊಪ್ಪಳ, ಗದಗ, ಹೊಳೆಆಲೂರು, ಬಾದಾಮಿ ಸೇರಿದಂತೆ ವಿವಿಧ ರೈಲ್ವೆ ನಿಲ್ದಾಣಗಳ ಮೂಲಕ ಫೆ. 24ರ ಸೋಮವಾರ 11 ಗಂಟೆಗೆ ಪ್ರಯಾಗ್‌ರಾಜ್ ರೈಲ್ವೆ ನಿಲ್ದಾಣ ತಲುಪಲಿದೆ.ಬನಾರಾಸ್‌ನಿಂದ ಫೆ. 25ರ ಮಂಗಳವಾರ ಮುಂಜಾನೆ 1.30ಕ್ಕೆ ಹೊರಡಲಿರುವ ರೈಲು, ಪ್ರಯಾಗ್‌ರಾಜ್‌ಗೆ ಮುಂಜಾನೆ 5.40ಕ್ಕೆ ಆಗಮಿಸಲಿದೆ. 5.45ಕ್ಕೆ ಪ್ರಯಾಗ್‌ರಾಜ್‌ನಿಂದ ಹೊರಡಲಿದೆ. ಫೆ. 27ರ ಗುರುವಾರ ಮುಂಜಾನೆ 6 ಗಂಟೆ 45 ನಿಮಿಷಕ್ಕೆ ಶಿವಮೊಗ್ಗಕ್ಕೆ ಆಗಮಿಸಲಿದೆ.ಫೆ. 15ರ ಮಧ್ಯಾಹ್ನ ವಿಶೇಷ ರೈಲಿನ ಟಿಕೆಟ್ ಬುಕ್ಕಿಂಗ್ ಸೇವೆ ಆರಂಭವಾಗಿದ್ದು, ಯಾತ್ರಾರ್ಥಿಗಳು ರೈಲಿನ ಸದುಪಯೋಗ ಪಡೆದುಕೊಳ್ಳುವಂತೆ ಸಂಸದ ಬಿ.ವೈ.ರಾಘವೇಂದ್ರ ಮನವಿ ಮಾಡಿದ್ದಾರೆ.ಪ್ರಯಾಗ್‌ರಾಜ್ ಕುಂಭಮೇಳಕ್ಕೆ ಶಿವಮೊಗ್ಗದಿಂದ ವಿಶೇಷ ರೈಲು ಓಡಿಸುವಂತೆ, ಲೋಕಸಭಾ ಸದಸ್ಯ ಬಿ.ವೈ ರಾಘವೇಂದ್ರ ಅವರಿಗೆ ಸಾರ್ವಜನಿಕರು ಮನವಿ ಮಾಡಿದ್ದರು. ಈ ಸಂಬಂಧ ಸಂಸದರು ರೈಲ್ವೆ ಇಲಾಖೆಗೆ ಕೋರಿಕೆ ಸಲ್ಲಿಸಿದ್ದರು. ಇದಕ್ಕೆ ಸ್ಪಂದಿಸಿರುವ ರೈಲ್ವೆ ಇಲಾಖೆಯು ವಿಶೇಷ ರೈಲು ಓಡಿಸಲು ಮುಂದಾಗಿದೆ.

## ಸುವರ್ಣ ಸೀರೆ ಸಮರ್ಪಣೆ



**ಶಿವಮೊಗ್ಗ:** ಆರ್ಯ ವೈಶ್ಯ ಮಹಾಜನ ಸಮಿತಿಯ ಶತಮಾನೋತ್ಸವ ಸಮಾ ರೋಪ ಸಮಾರಂಭದ ಅಂಗವಾಗಿ ನಗರದ ಗಾಂಧಿ ಬಜಾರ್‌ನಲ್ಲಿರುವ ಶ್ರೀ ಕನ್ಯಕಾ ಪರಮೇಶ್ವರಿ ದೇವಿ ಮೂರ್ತಿಗೆ ಆಕರ್ಷಕ ಸುವರ್ಣ ಸೀರೆ ಸಮ ರ್ಪಣೆ ಮಾಡಲಾಯಿತು.

# ನೆಲ-ಜಲ-ಭಾಷೆ ವಿಚಾರದಲ್ಲಿ ನಾನು ಸದಾ ಕನ್ನಡಿಗ



ಮುಖ್ಯಮಂತ್ರಿಗಳ ಮಾಧ್ಯಮ ಪ್ರಕಟಣೆ

**ಬೆಂಗಳೂರು:** ನೀರಾವರಿ ವಿಚಾರದಲ್ಲಿ ರಾಜ್ಯಕ್ಕೆ ಆಗಿರುವ ಅನ್ಯಾಯದ ವಿರುದ್ಧ ಪಕ್ಷಾತೀತವಾಗಿ ಹೋರಾಡಲು ಸಿದ್ಧ ಎಂಬ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಹೇಳಿಕೆಯನ್ನು ನಾನು ಸಂಪೂರ್ಣ ಸ್ವಾಗತಿಸುತ್ತೇನೆ. ವೈಯಕ್ತಿಕವಾಗಿ ಇದು ನನ್ನ ಅಭಿಪ್ರಾಯವಾಗಿದ್ದು, ನೆಲ-ಜಲ-ಭಾಷೆ ವಿಚಾರದಲ್ಲಿ ನಾನು ಸದಾ ಕನ್ನಡಿಗನಾಗಿ ನಡೆದುಕೊಂಡಿದ್ದೇನೆಯೇ ಹೊರತು ರಾಜಕಾರಣಿಯಾಗಿ ಅಲ್ಲ ಎನ್ನುವುದನ್ನು ಹಿರಿಯರಾದ ದೇವೇಗೌಡರ ಗಮನಕ್ಕೆ ತರಬಯಸುತ್ತೇನೆ.

ಹತ್ತು ದಿನಗಳ ಅವಧಿಯಲ್ಲಿ 15,000 ಕ್ಯುಸೆಕ್ಸ್ ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸಬೇಕೆಂದು 2016ರ ಸೆಪ್ಟೆಂಬರ್ ತಿಂಗಳಲ್ಲಿ ಸುಪ್ರೀಂ ಕೋರ್ಟ್ ಆದೇಶ ನೀಡಿದಾಗ ಉದ್ಭವವಾದ ಬಿಕ್ಕಟ್ಟಿನ ಸಂದರ್ಭದಲ್ಲಿ ಮುಖ್ಯಮಂತ್ರಿಯಾಗಿದ್ದ ನಾನು ನಿಮ್ಮ ಮನೆಗೆ ಬಂದು ಕೈಹಿಡಿದು ಕರೆದುಕೊಂಡು ಬಂದು ಸರ್ವಪಕ್ಷಗಳ ಸಭೆ ನಡೆಸಿದ್ದು ನಿಮಗೆ ನೆನಪಿರಬಹುದೆಂದು ಭಾವಿಸಿದ್ದೇನೆ.

ಹಿಂದೆಲ್ಲ ರಾಜ್ಯದ ಹಿತಾಸಕ್ತಿಯ ರಕ್ಷಣೆಯ ಪ್ರಶ್ನೆ ಎದುರಾದಾಗ ಒಬ್ಬ ಮುತ್ಸದ್ದಿಯಾಗಿ ಇದಕ್ಕಿಂತಲೂ ಮುಖ್ಯವಾಗಿ ಒಬ್ಬ ಹೆಮ್ಮೆಯ ಕನ್ನಡಿಗನಾಗಿ ರಾಜ್ಯಕ್ಕೆ ನ್ಯಾಯ ಕೊಡಲು ನೀವು ಹೋರಾಟ ನಡೆಸಿದ್ದನ್ನು ರಾಜ್ಯದ ಜನರು ಗಮನಿಸಿದ್ದಾರೆ. ಆದರೆ ಇತ್ತೀಚೆಗೆ ನೀವು ಮತ್ತು ನಿಮ್ಮ ಪಕ್ಷ ಕೇಂದ್ರ ಸರ್ಕಾರದ ವಕ್ತಾರರಂತೆ ಪಕ್ಷಪಾತಿಯಾಗಿ ವರ್ತಿಸುತ್ತಿರುವುದನ್ನು ಕೂಡಾ ನನ್ನನ್ನೂ ಸೇರಿದಂತೆ ಏಳುಕೋಟಿ ಕನ್ನಡಿಗರು ಗಮನಿಸುತ್ತಿದ್ದಾರೆ. ಕೇಂದ್ರ ಸಂಪುಟದಲ್ಲಿ ಮಗನನ್ನು ಸಚಿವನನ್ನಾಗಿ ಮಾಡಲು ಗೌಡರು ಇಷ್ಟೊಂದು ರಾಜಿ ಮಾಡಿಕೊಳ್ಳುವ ಅಗತ್ಯ ಇತ್ತಾ? ಎಂದು ಜನ ಪ್ರಶ್ನಿಸುತ್ತಿದ್ದಾರೆ.

ನೀರಾವರಿ ವಿಚಾರದಲ್ಲಿ ನ್ಯಾಯಪಕ್ಷಪಾತಿಯಾಗಿ ಕರ್ನಾಟಕದ ಹಿತಾಸಕ್ತಿಯ ರಕ್ಷಣೆ ಮಾಡಬೇಕಾಗಿದ್ದ ಕೇಂದ್ರದ ನರೇಂದ್ರ ಮೋದಿ ಅವರ ನೇತೃತ್ವದ ಬಿಜೆಪಿ ಸರ್ಕಾರ ಸತತವಾಗಿ ಕನ್ನಡಿಗರ ಹಿತವನ್ನು ಬಲಿಗೊಡಲು ಹೊರಟಿರುವುದನ್ನು ಸನ್ಮಾನ್ಯ ದೇವೇಗೌಡರಿಗೆ ನಾನು ಬಿಡಿಸಿ ಹೇಳಬೇಕಾಗಿಲ್ಲ ಎಂದು ತಿಳಿದುಕೊಂಡಿದ್ದೇನೆ.

ಮಹದಾಯಿ ಜಲಾನಯನ ಪ್ರದೇಶದ ಕಳಸಾ ನಾಲೆ ಯೋಜನೆಯ ರೂ.995.30 ಕೋಟಿ ವೆಚ್ಚದ ವಿಸ್ತೃತ ಯೋಜನಾ ವರದಿ (ಡಿಪಿಆರ್ )ಗೆ 2023ರ ಮಾರ್ಚ್ ನಲ್ಲಿಯೇ ಅನುಮೋದನೆ ನೀಡಲಾಗಿದೆ. ಈ ಯೋಜನೆಗೆ ಅಗತ್ಯವಿರುವ ಭೂಮಿಯಲ್ಲಿ 26,925 ಹೆಕ್ಟೇರ್ ಅರಣ್ಯಪ್ರದೇಶದ ಸ್ವಾಧೀನ ಪ್ರಕ್ರಿಯೆ ಗೋವಾ ರಾಜ್ಯದ ಆಕ್ಷೇಪದ ಕಾರಣದಿಂದಾಗಿ ಕುಂಟುತ್ತಾ ಸಾಗಿದೆ. ಪ್ರಸ್ತುತ ಈ ಪ್ರಕ್ರಿಯೆ ರಾಷ್ಟ್ರೀಯ ವನ್ಯಜೀವಿ ಮಂಡಳಿ (ಎನ್ ಬಿಡಬ್ಲ್ಯುಎಲ್ ) ಮತ್ತು ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರ (ಎನ್ ಟಿಸಿಎ)ದ ಪರಿಶೀಲನೆಯಲ್ಲಿದೆ. ಈ ಯೋಜನೆಗೆ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರ ಅನುಮೋದನೆ ಪಡೆಯಬಹುದು ಎಂದು ಸುಪ್ರೀಂ ಕೋರ್ಟ್ ಸ್ಪಷ್ಟೀಕರಣ ನೀಡಿರುವ ಕಾರಣ ಶೀಘ್ರವಾಗಿ ಈ ಯೋಜನೆಗೆ ಕೇಂದ್ರ ಸರ್ಕಾರ ಅನುಮತಿ ನೀಡಬೇಕಾಗಿದೆ.

ಬಂಡೂರಿ ನಾಲೆ ತಿರುವು ಯೋಜನೆಗೆ ಅಗತ್ಯವಿರುವ 28 ಹೆಕ್ಟೇರ್ ಅರಣ್ಯ ಪ್ರದೇಶದ ಸ್ವಾಧೀನಕ್ಕಾಗಿ 2024ರ ಆಗಸ್ಟ್‌ನಲ್ಲಿಯೇ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ. ಈ ಬೇಡಿಕೆಗೆ ಸಂಬಂಧಿಸಿದ ಇತರ ಪ್ರಕ್ರಿಯೆಗಳನ್ನು ರಾಜ್ಯ ಸರ್ಕಾರ ಸಂಪೂರ್ಣಗೊಳಿಸಲಾಗಿದ್ದು ಈ ನದಿ ತಿರುವು ಯೋಜನೆಗೆ ಕೇಂದ್ರ ಸರ್ಕಾರ ಅನುಮತಿ ನೀಡುವುದಷ್ಟೇ ಬಾಕಿ ಉಳಿದಿದೆ.

ಕೃಷ್ಣಾ ಜಲವಿವಾದ ನ್ಯಾಯಮಂಡಳಿ ಕರ್ನಾಟಕಕ್ಕೆ 173 ಟಿಎಂಸಿ ನೀರಿನ ಪಾಲನ್ನು ನೀಡಿ 2010ರಲ್ಲಿಯೇ ಐತೀರ್ಪು ನೀಡಿದೆ. ಈ ನೀರಿನ ಪಾಲಿನಲ್ಲಿ 130 ಟಿಎಂಸಿಯನ್ನು ಬಳಸಿಕೊಂಡು ಉತ್ತರ ಕರ್ನಾಟಕದ ಏಳು ಜಿಲ್ಲೆಗಳಿಗೆ ನೀರುಣಿಸುವ ರೂ.51,148 ಸಾವಿರ ವೆಚ್ಚದ ಮೂರನೇ ಹಂತದ ಕೃಷ್ಣಾ ಮೇಲ್ದಂಡೆ ಯೋಜನೆ ಅನುಷ್ಠಾನಕ್ಕೆ ಸಿದ್ಧವಾಗಿದೆ. ಆದರೆ ಸುಪ್ರೀಂ ಕೋರ್ಟ್ ನಲ್ಲಿ ವಿಚಾರಣೆಯಲ್ಲಿರುವ ಪ್ರತಿವಾದಿ ರಾಜ್ಯಗಳ ಆಕ್ಷೇಪಣಾ ಅರ್ಜಿಗಳನ್ನು ಉಲ್ಲೇಖಿಸಿ ಕೇಂದ್ರ ಸರ್ಕಾರ ನ್ಯಾಯಮಂಡಳಿಯ ಐತೀರ್ಪನ್ನು ಗೆಜೆಟ್ ನಲ್ಲಿ ಪ್ರಕಟಿಸಲು ನಿರಾಕರಿಸುತ್ತಾ ಬಂದಿದೆ. ಈ ಯೋಜನೆಯ ಅನಿವಾರ್ಯತೆಯನ್ನು ಸುಪ್ರೀಂಕೋರ್ಟ್ ಗೆ ಮನವರಿಕೆ ಮಾಡಿಕೊಟ್ಟು ಶೀಘ್ರವಾಗಿ ಐತೀರ್ಪನ್ನು ಗೆಜೆಟ್ ನಲ್ಲಿ ಪ್ರಕಟಿಸಿದರೆ ಈ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಬೇಕೆಂಬ ಪ್ರಸ್ತಾವವನ್ನು ಸಲ್ಲಿಸಲು ಅನುಕೂಲವಾಗುತ್ತದೆ.ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಎಂದು ಘೋಷಣೆ ಮಾಡಿದರೆ ಚಿಕ್ಕಮಗಳೂರು, ಚಿತ್ರದುರ್ಗ, ತುಮಕೂರು ಮತ್ತು ದಾವಣಗೆರೆಯ ಬರಪೀಡಿತ ಪ್ರದೇಶಗಳಿಗೆ ವರದಾನವಾಗಲಿದೆ. ಈ ಘೋಷಣೆಯ ಪ್ರಸ್ತಾವಕ್ಕೆ ಸಾರ್ವಜನಿಕ ಹೂಡಿಕೆ ಸಮಿತಿ ಈಗಾಗಲೇ ಅಂಗೀಕಾರ ನೀಡಿದೆ. ಆದರೆ ಕೇಂದ್ರ ಸರ್ಕಾರ ಮೀನಮೇಷ ಎಣಿಸುತ್ತಾ ಕೂತಿದೆ.

ಬೆಂಗಳೂರು ನಗರಕ್ಕೆ ಕುಡಿಯುವ ನೀರಿನ ಪೂರೈಕೆ ಮತ್ತು 400 ಮೆಗಾವಾಟ್ ವಿದ್ಯುತ್ ಉತ್ಪಾದನೆಗಾಗಿಯೇ ಮೇಕೆದಾಟು ಯೋಜನೆಯನ್ನು ರೂಪಿಸಲಾಗಿದೆ. ಈ ಯೋಜನೆಯ ವಿವರಗಳೆಲ್ಲ ನಿಮಗೆ ಬಾಯಿಪಾಠದಲ್ಲಿರಬಹುದು. ಈ ಯೋಜನೆಗೆ ಕೇಂದ್ರ ಸರ್ಕಾರದಿಂದ ಅನುಮತಿ ದೊರಕಿಸಿಕೊಟ್ಟರೆ ಬೆಂಗಳೂರು ನಿವಾಸಿಗಳು ಸದಾ ನಿಮಗೆ ಋಣಿಯಾಗಿರುತ್ತಾರೆ.

ಕೃಷ್ಣಾ ಮತ್ತು ಕಾವೇರಿ ನದಿಗಳ ಜೋಡಣೆಯ ನೀರಾವರಿ ಯೋಜನೆಯ ಬಗ್ಗೆ ನಿಮ್ಮ ಕಳಕಳಿಗೆ ನಮ್ಮ ಸಂಪೂರ್ಣ ಸಹಕಾರ ಇದೆ. ಈ ವಿಷಯದಲ್ಲಿ ನೀವು ನಡೆಸುವ ಹೋರಾಟಕ್ಕೆ ನಾನು ಮತ್ತು ಡಿ.ಕೆ.ಶಿವಕುಮಾರ್ ಮಾತ್ರವಲ್ಲ ಸಮಸ್ತ ಕರ್ನಾಟಕ ನಿಮ್ಮ ಜೊತೆ ಇರುತ್ತದೆ. ಆದರೆ ಹೊಸ ನೀರಾವರಿ ಯೋಜನೆಗಳನ್ನು ಪ್ರಾರಂಭಿಸುವ ಮೊದಲು ಅಪೂರ್ಣ ಸ್ಥಿತಿಯಲ್ಲಿರುವ ನೀರಾವರಿ ಯೋಜನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ನಿಮ್ಮ ಸಹಕಾರ ಇರಲಿ ಎಂದು ಮನವಿ ಮಾಡಿಕೊಳ್ಳುತ್ತಿದ್ದೇನೆ.

ಕರ್ನಾಟಕ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯಗಳ ಸರಮಾಲೆಯನ್ನು ಸದ್ಯ ನೀರಾವರಿ ಕ್ಷೇತ್ರಕ್ಕಷ್ಟೇ ಸೀಮಿತಗೊಳಿಸುತ್ತಿದ್ದೇನೆ. ಇನ್ನು ತೆರಿಗೆ ಹಂಚಿಕೆ, ಪ್ರಕೃತಿ ವಿಕೋಪ ಪರಿಹಾರ, ಕುಡಿಯುವ ನೀರು ಪೂರೈಕೆ, ರೈಲ್ವೆ ಯೋಜನೆಗಳ ವಿಚಾರದಲ್ಲಿಯೂ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಕರ್ನಾಟಕವನ್ನು ಶತ್ರು ರಾಜ್ಯದಂತೆ ನಡೆಸಿಕೊಳ್ಳುತ್ತಿದೆ. ಈ ವಿಚಾರಗಳು ಕೂಡಾ ನಿಮಗೆ ಗೊತ್ತಿರುವುದರಿಂದ ಸಂಸತ್ ನಲ್ಲಿ ಈ ಬಗ್ಗೆ ನೀವು ದನಿ ಎತ್ತುತ್ತೀರಿ ಎಂದು ರಾಜ್ಯದ ಜನರು ನಿರೀಕ್ಷಿಸಿದ್ದರು.

ಕೇಂದ್ರದಲ್ಲಿ ಯಾವ ಪಕ್ಷದ ಸರ್ಕಾರ ಇದ್ದರೂ ನೀವು ಮುಲಾಜಿಗೆ ಬೀಳದೆ ಕರ್ನಾಟಕದ ಹಿತಾಸಕ್ತಿಯ ರಕ್ಷಣೆಯ ಪ್ರಶ್ನೆ ಎದುರಾದಾಗ ದನಿ ಎತ್ತುತ್ತಾ ಬಂದವರು. ಆ ಮುತ್ಸದ್ದಿ ದೇವೇಗೌಡರನ್ನು ಕಾಣಲು ಕನ್ನಡಿಗರು ಬಯಸುತ್ತಿದ್ದಾರೆ. ಆದರೆ ಈಗಿನ ದೇವೇಗೌಡರು ಬಿಜೆಪಿ ಮತ್ತು ನರೇಂದ್ರ ಮೋದಿಯವರ ಚಿಯರ್ ಲೀಡರ್ ರೀತಿ ವರ್ತಿಸುತ್ತಿದ್ದಾರೆ ಎಂದು ವಿಷಾದದಿಂದ ಹೇಳಬೇಕಾಗಿದೆ.

ದೈಹಿಕವಾಗಿ ನೀವು ಸ್ವಲ್ಪ ಕುಗ್ಗಿದಂತೆ ಕಂಡರೂ ಮಾನಸಿಕವಾಗಿ ನೀವಿನ್ನೂ ದೃಡವಾಗಿದ್ದೀರಿ. ದಯವಿಟ್ಟು ಈಗಲಾದರೂ ಪಕ್ಷ ರಾಜಕಾರಣವನ್ನು ಮೀರಿ ಒಬ್ಬ ಮುತ್ಸದ್ದಿ ನಾಯಕನ ರೀತಿಯಲ್ಲಿ ಕನ್ನಡ-ಕನ್ನಡಿಗ-ಕರ್ನಾಟಕದ ಹಿತರಕ್ಷಣೆಗೆ ಮುಂದಾಗಬೇಕೆಂದು ನಿಮ್ಮಲ್ಲಿ ಮನವಿ ಮಾಡಿಕೊಳ್ಳುತ್ತಿದ್ದೇನೆ. ಈ ನಿಟ್ಟಿನಲ್ಲಿ ನೀವು ಮಾಡುವ ಪ್ರಯತ್ನಕ್ಕೆ ನಮ್ಮ ಸರ್ಕಾರದ ಸಂಪೂರ್ಣ ಬೆಂಬಲ ಇದೆ. ಏಳು ಕೋಟಿ ಕನ್ನಡಿಗರೂ ನಿಮ್ಮ ಜೊತೆಯಲ್ಲಿ ಇರುತ್ತಾರೆ ಎಂಬ ಭರವಸೆಯೂ ನನಗಿದೆ.

## ತುಂಗಭದ್ರಾ ಆರತಿ ಜನತೆಗೆ ಪುಣ್ಯ ಪ್ರಾಪ್ತಿಯಾಗಲಿ



**ಹರಿಹರ:** ಪುಣ್ಯಕೋಟಿ ಹೆಸರಿನಲ್ಲಿ ಸ್ಥಾಪಿತಗೊಂಡಿರುವ ಅವಿಮುಕ್ತ ಪುಣ್ಯಕೋಟಿ ಮಠದಿಂದ ಪವಿತ್ರ ತುಂಗಭದ್ರಾ ನದಿಗೆ ನಡೆಸುತ್ತಿರುವ ತುಂಗಭದ್ರಾ ಆರತಿ ಧಾರ್ಮಿಕ ಕಾರ್ಯಕ್ರಮದಿಂದ ಮಠದ ಸುತ್ತಮುತ್ತಲಿನ ಗ್ರಾಮಗಳ ಸಮಸ್ತರಿಗೂ ನಾಡಿನ ಜನತೆಗೂ ಪುಣ್ಯ ಪ್ರಾಪ್ತಿಯಾಗಲಿ ಎಂದು ಶ್ರೀಮದ್ ಗಿರಿರಾಜ ಶ್ರೀಶೈಲ ಸೂರ್ಯಸಿಂಹಾಸನಾಧೀಶ್ವರರಾದ ಶ್ರೀಶ್ರೀಶ್ರೀ1008 ಜಗದ್ಗುರು ಡಾ.ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಭಗವತ್ಪಾದ ಹೇಳಿದರು.

ಸಮೀಪದ ಕೋಡಿಯಾಲ ಹೊಸಪೇಟೆ (ಕುಮಾರಪಟ್ಟಣ) ಗ್ರಾಮದ ಅವಿಮುಕ್ತ ತಪೋಕ್ಷೇತ್ರ ಪುಣ್ಯಕೋಟಿ ಮಠದ ಬಲ ಭಾಗದಲ್ಲಿ ಪೂರ್ವ-ಉತ್ತರಾಭಿಮುಖವಾಗಿ ಹರಿಯುತ್ತಿರುವ ತುಂಗಭದ್ರಾ ನದಿ ತೀರದಲ್ಲಿ ಉತ್ತರ ಭಾರತದ ಗಂಗಾ ನದಿ ತೀರದಲ್ಲಿ ಜರುಗುವ ಗಂಗಾರತಿ ಮಾದರಿಯಲ್ಲಿ ನಡೆದ 6ನೇ ವರ್ಷದ ಐತಿಹಾಸಿಕ 'ತುಂಗಭದ್ರಾ ಆರತಿ' ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಮಾನವ ಜನ್ಮಸಾರ್ಥಕಕ್ಕಾಗಿ ಗಂಗಾ ಸ್ನಾನಂ-ತುಂಗಾ ಪಾನಂ ಎನ್ನುತ್ತಾರೆ. ಅದರಂತೆ ಇಂದು ಪವಿತ್ರ ತುಂಗಭದ್ರಾ ನದಿಗೆ ನಡೆಸುತ್ತಿರುವ ಆರತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಸರ್ವರಿಗೂ, ಭಕ್ತಿಯಿಂದ ಕಾರ್ಯಕ್ರಮ ವೀಕ್ಷಿಸಿದ ಸಮಸ್ತ ಜನತೆಗೂ, ಸುತ್ತಮುತ್ತಲಿನ ಗ್ರಾಮಸ್ಥರಿಗೂ ಪುಣ್ಯ ಪ್ರಾಪ್ತಿಯಾಗುವುದು. ಈ ಕಾರ್ಯಕ್ರಮದಿಂದ ಸಮಸ್ತ ಜನತೆಯ ಆರೋಗ್ಯ ಭಾಗ್ಯ ಹೆಚ್ಚುವುದು. ಪುಣ್ಯಕೋಟಿಯ ಆಶೀರ್ವಾದವು ಎಲ್ಲರಿಗೂ ಲಭಿಸಲಿದೆ ಎಂದು ಶ್ರೀಗಳು ಹೇಳಿದರು.

ಸವಣೂರು ದೊಡ್ಡ ಹುಣಸೇಕಲ್ಮಠದ ಮ.ನಿ.ಪ್ರ ಚನ್ನಬಸವ ಸ್ವಾಮಿಗಳು, ಕಡೆನಂದಿಹಳ್ಳಿ ರೇವಣಸಿದ್ದೇಶ್ವರ ಪುಣ್ಯಾಶ್ರಮದ ಶ್ರೀರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು, ಅಕ್ಕಿ ಆಲೂರು ಮುತ್ತಿನಕಂತಿ ಮಠದ ಶ್ರೀಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು, ನಾಗವಂದ ಧರ್ಮಕ್ಷೇತ್ರದ ಶ್ರೀಶಿವಯೋಗಿ ಶಿವಾನಂದ ಶಿವಾಚಾರ್ಯ ಮಹಾಸ್ವಾಮಿಗಳು, ವಿಜಯಪುರ ಸಿದ್ದಲಿಂಗೇಶ್ವರ ಮಠದ ಸಿದ್ದಲಿಂಗಸ್ವಾಮಿಗಳು ಆಶೀರ್ವಚನ ನೀಡಿದರು.

ಪುಣ್ಯಕೋಟಿ ಮಠದ ಬಾಲಯೋಗಿ ಜಗದೀಶ್ವರ ಸ್ವಾಮೀಜಿ ಮಾತನಾಡಿ, ಕಳೆದ 5 ವರ್ಷಗಳಿಂದ ತುಂಗಾರತಿ ಎಂಬ ಹೆಸರಿನಲ್ಲಿ ನಡೆಯುತ್ತಿದ್ದ ಕಾರ್ಯಕ್ರಮವನ್ನು ನಾಡಿನ ಜನತೆಯ ಹಾಗೂ ಭಕ್ತರ ಸದಾಭಿಪ್ರಾಯದಂತೆ ಈ ವರ್ಷದಿಂದ 'ತುಂಗಭದ್ರಾ ಆರತಿ' ಕಾರ್ಯಕ್ರಮವನ್ನಾಗಿ ಆಚರಿಸುತ್ತಿದ್ದೇವೆ. ಸಹಕರಿಸಿ ಸರ್ವರಿಗೂ ಅನಂತಕೋಟಿ ನಮನ ತಿಳಿಸುತ್ತೇವೆ ಎಂದರು.

ಶಾಸಕ ಪ್ರಕಾಶ ಕೋಳಿವಾಡ ಅಧ್ಯಕ್ಷತೆ ವಹಿಸಿದ್ದರು. ವಿಧಾನಸಭೆಯ ಉಪ ಸಭಾಪತಿ ರುದ್ರಪ್ಪ ಲಮಾಣಿ ಕಾರ್ಯಕ್ರಮ ಉದ್ಘಾಟಿಸಿದರು. ಗ್ರಾಸಿಂ ಕಾರ್ಖಾನೆಯ ಅಧ್ಯಕ್ಷ ಸೌಮ್ಯಕಾಂತ್ ಮೊಹಂತಿ, ತಪೋವನದ ಡಾ. ಶಶಿಕುಮಾರ ಮೆಹರವಾಡೆ, ಅರುಣಕುಮಾರ್ ಪೂಜಾರ, ಪ್ರಥಮ ದರ್ಜೆ ಗುತ್ತಿಗೆದಾರ ಶಂಕರ ಗಡ್ಡದ, ಕೋಡಿಯಾಲ ಹೊಸಪೇಟೆ ಗ್ರಾಮದ ನೀಲಮ್ಮ ಸಣ್ಣ ಹನುಮಂತಗೌಡ ಪಾಟೀಲ, ರವಿಂದ್ರಗೌಡ ಎಫ್. ಪಾಟೀಲ, ಕರಿಯಪ್ಪ ಮಾಳಗಿ, ಅವರವಳ್ಳಿ ರುದ್ರಸ್ವಾಮಿ ಮಠದ ಚನ್ನಬಸವ ದೇವರು, ಬೆಲವಂತರ ಮೃತ್ಯುಂಜಯ ಹಿರೇಮಠ, ಹೊಳಲಕೆರೆ ಪುನಿತ್‌ಶಾಸ್ತ್ರಿ, ಶಿರಗುಪ್ಪಿ ಸಂಗಯ್ಯ ಶಾಸ್ತ್ರಿ, ರಾಣೆಬೇನ್ನೂರು ಪುನಿತ್ ಶಾಸ್ತ್ರಿ, ರೇಣುಕಾ ಶಾಸ್ತ್ರಿ, ಹರಿಹರದ ಕುಮಾರ ಶಾಸ್ತ್ರಿ, ಬ್ಯಾಡಗಿಯ ಮಂಜಯ್ಯ ಶಾಸ್ತ್ರಿ, ರೇಣುಕಯ್ಯ ಶಾಸ್ತ್ರಿ ಇದ್ದರು.

## ಪೂಜೆ ಸೋಗಿನಲ್ಲಿ ಚಿನ್ನ ದೋಚಿದ ಪ್ರಕರಣ: ಇಬ್ಬರು ಆರೋಪಿಗಳ ಬಂಧನ

**ಹರಿಹರ:** ಮನೆಯಲ್ಲಿ ಆಗಾಗ ತಲೆದೋರುತ್ತಿರುವ ಆರ್ಥಿಕ ಸಮಸ್ಯೆಗೆ ಪೂಜೆಯ ಮೂಲಕ ಪರಿಹರಿಸುತ್ತೇವೆ ಎಂದು ಆರ್ಥಿಕ ಸಂಕಷ್ಟದಿಂದ ನರಳುತ್ತಿರುವವರ ಮನೆಗೆ ಪೂಜಾರ್ಥಿಗಳ ವೇಷದಲ್ಲಿ ಬಂದು ಮನೆಯಲ್ಲಿ ಪೂಜೆ ನಡೆಸುವ ನೆಪದಲ್ಲಿ ಪೂಜೆಗಿಟ್ಟಿದ್ದ ಚಿನ್ನದ ಆಭರಣಗಳನ್ನು ದೋಚಿದ್ದ ಕಳ್ಳರನ್ನು ಬಂಧಿಸುವಲ್ಲಿ ಇಲ್ಲಿನ ಗ್ರಾಮಾಂತರ ಠಾಣೆಯ ಪೋಲಿಸರು ಯಶಸ್ವಿಯಾಗಿದ್ದಾರೆ.

ಇಸ್ಮಾಯಿಲ್ ಜಬಿವುಲ್ಲಾ ಮಹ್ಮದ್ ಅನೀಫ್, ರುಕ್ಸಾನ ಬೇಗಂ ಜಲಾಲುದ್ದೀನ್ ಖಾನ್ ಬಂಧಿತ ಆರೋಪಿಗಳು. ಕಳೆದ 4 ದಿನಗಳ ಹಿಂದೆ ಫೆ.11ರಂದು ತಾಲೂಕಿನ ಬನ್ನಿಕೊಡು ಗ್ರಾಮದ ಶಶಿಕಲಾ ರಮೇಶ್ ಎಂಬುವವರ ಮನೆಗೆ ಸಂಜೆಯ ಸಮಯದಲ್ಲಿ ಈ ಇಬ್ಬರು ಆರೋಪಿಗಳು, ನಿಮ್ಮ ಮನೆಯಲ್ಲಿ ಪೂಜೆಗೆ ಸಿದ್ಧತೆ ಮಾಡಿಕೊಳ್ಳಿ, ನಿಮ್ಮ ಆರ್ಥಿಕ ಸಮಸ್ಯೆಗೆ ನಾವು ಪರಿಹಾರ ನೀಡುತ್ತೇವೆ. ನಿಮ್ಮ ಮನೆಯಲ್ಲಿರುವ ಬೆಳ್ಳಿ, ಚಿನ್ನಾಭರಣಗಳನ್ನು ಪೂಜೆಯಲ್ಲಿಡಬೇಕೆಂದು ಪೂಜಾರ್ಥಿಗಳ ಸೋಗಿನಲ್ಲಿ ಬಂದು ತಿಳಿಸಿದ್ದಾರೆ. ಪೂಜೆಗಿಟ್ಟಿದ್ದ 1.44 ಲಕ್ಷ ರೂ. ಮೌಲ್ಯದ 2 ತೊಲ, 2 ಗ್ರಾಂ ಚಿನ್ನಾಭರಣ ದೋಚಿದ್ದಾರೆ ಎಂದು ಬನ್ನಿಕೋಡು ಗ್ರಾಮದ ಶಶಿಕಲಾ ರಮೇಶ್ ನೀಡಿದ ದೂರಿನ್ವಯ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದ ಹರಿಹರ ಗ್ರಾಮಾಂತರ ಠಾಣೆಯ ಪೋಲೀಸರು, ಎಸ್ಪಿ ಉಮಾ ಪ್ರಶಾಂತ್, ಹೆಚ್ಚುವರಿ ಎಸ್ಪಿ ವಿಜಯಕುಮಾರ್ ಸಂತೋಷ, ಬಿ.ಮಂಜುನಾಥ್, ಗ್ರಾಮಾಂತರ ಡಿಎಸ್ಪಿ ಬಿ.ಎಸ್.ಬಸವರಾಜ ಮಾರ್ಗದರ್ಶನದಲ್ಲಿ ತನಿಖೆ ನಡೆಸಿದ್ದರು. ಗ್ರಾಮಾಂತರ ಸಿಪಿಐ ಸುರೇಶ ಸಗರಿ ನೇತೃತ್ವದಲ್ಲಿ ಪಿಎಸ್‌ಐ ಮಂಜುನಾಥ ಎಸ್.ಕುಪ್ಪೇಲೂರು, ತನಿಖಾಧಿಕಾರಿ ಮಹದೇವ ಸಿದ್ದಪ್ಪ ಭತ್ತೆ 5 ದಿನ ಕಾರ್ಯಾಚರಣೆ ನಡೆಸಿದಾಗ ಆರೋಪಿಗಳನ್ನು ಒಡಿಸ್ಸಾ ರಾಜ್ಯದಲ್ಲಿ ಬಂಧಿಸಿ ವಿಚಾರಣೆಗೊಳಪಡಿಸಿದಾಗ ಹರಿಹರ ಗ್ರಾಮಾಂತರದಲ್ಲಿ 2 ಪ್ರಕರಣ, ದಾವಣಗೆರೆ ಅಜಾದ್ ನಗರದಲ್ಲಿ 1 ಪ್ರಕರಣದಲ್ಲಿ ಇವರ ಹೆಸರು ಪತ್ತೆ ಆಗಿದೆ. ಬಂಧಿತರಿಂದ ಅಂದಾಜು 8.65 ಲಕ್ಷ ರೂ. ಮೌಲ್ಯದ 90 ಗ್ರಾಂ ತೂಕದ ಚಿನ್ನಾಭರಣಗಳು ಹಾಗೂ 750 ಗ್ರಾಂ ತೂಕದ ಬೆಳ್ಳಿ ಆಭರಣ ವಶಪಡಿಸಿಕೊಂಡು, ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದಾರೆ.

ಕಾರ್ಯಾಚರಣೆಯಲ್ಲಿ ಎಎಸ್‌ಐ ಎಚ್.ಸಿ.ತಿಪ್ಪೇಸ್ವಾಮಿ, ಜಿ.ಎನ್.ರಮೇಶ, ನೀಲಮೂರ್ತಿ, ದಾದಾಪೀರ್, ಅನಿಲ್‌ಕುಮಾರ್, ಬಸವನಗೌಡ, ಲಿಂಗರಾಜ್, ಕರಿಯಪ್ಪ, ಸಿಪಿಐ ಟಿ.ವಿ.ಸತೀಶ, ರಿಜ್ವಾನ್ ನಾಸೂರ್, ಗಂಗಾಧರ, ಸುರೇಶ ಉಪ್ಪಾರ, ಪ್ರಸನ್ನಕಾಂತ, ಅನೀಲಕುಮಾರ ನಾಯ್ಕ, ಕಡೆಮನಿ ನಾಗಪ್ಪ, ಅರ್ಜುನ್ ನಂದ್ಯಾಲ, ಸಿ.ಎಂ.ಸುಶೀಲ, ನಾಜೀಮಾ, ಪವಿತ್ರಾ, ಚಾಲಕ ಸಿದ್ದಪ್ಪ ಅವರ ಕಾರ್ಯಾಚರಣೆಗೆ ಜಿಲ್ಲಾ ಪೊಲೀಸ್ ಇಲಾಖೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ರಾಜಕಾರಣಿಗಳಿಗೆ ಸಾಹಿತ್ಯದ ಒಲವಿದ್ದರೆ ನಡೆ-ನುಡಿಯಲ್ಲಿ ಬದಲಾವಣೆ ಕಾಣಲು ಸಾಧ್ಯ



**ಸಾಗರ:** ರಾಜಕೀಯ ಮತ್ತು ಸಾಹಿತ್ಯ ಸಾಮಿಪ್ಯದ ಪದಗಳು. ರಾಜಕಾರ ಣಿಗಳಿಗೆ ಸಾಹಿತ್ಯದ ಒಲವಿದ್ದರೆ ಅವರ ನಡೆ ನುಡಿಯಲ್ಲಿ ವಿಶೇಷ ಬದಲಾ ವಣೆ ಕಾಣಲು ಸಾಧ್ಯ ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ. ಉಮೇಶ್ ಕುಂಸಿ ತಿಳಿಸಿದರು.

ಇಲ್ಲಿನ ವರದಹಳ್ಳಿ ರಸ್ತೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯದಲ್ಲಿ ಶುಕ್ರವಾರ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಕಮಲಮ್ಮ ಕೆ.ಜಿ. ಒಡೆಯರ್ ನೀಡಿದ ದತ್ತಿ ರಾಜಕೀಯ ಮತ್ತು ಸಾಹಿತ್ಯ ಕುರಿತು ಉಪನ್ಯಾಸ ನೀಡುತ್ತಿದ್ದರು.ನಮ್ಮ ನಡುವೆ ಚುನಾಯಿತರಾದ ಅನೇಕರು ಮೈಲಿಗಲ್ಲು ಉಳಿಸಿ ಹೋಗಿ ದ್ದಾರೆ. ತಾವು ಆಡಳಿತ ನಡೆಸುವ ದಿನಮಾನಗಳಲ್ಲಿ ಯಾವ ರೀತಿ ಪ್ರಜಾ ಪ್ರತಿನಿಧಿಯಾಗಿ ಕೆಲಸ ಮಾಡುತ್ತೇವೆ ಎನ್ನುವುದೇ ಮುಖ್ಯವಾಗಿರುತ್ತದೆ. ರಾಜಕಾರಣ, ಪ್ರಭುತ್ವ, ಸಾಹಿತ್ಯ ಬೇರೆ ಬೇರೆ ಶಬ್ದಗಳಾದರೂ ಒಂದ ಕ್ಕೊಂದು ಬೆಸೆದು ಕೊಂಡಿರುತ್ತದೆ. ಸಾಹಿತ್ಯದ ಸಾಂಗತ್ಯ ಇದ್ದರೆ ಉತ್ತಮ ಜನಪ್ರತಿನಿಧಿಯಾಗಬಹುದು ಎನ್ನುವುದು ಅನೇಕ ಸಂದರ್ಭದಲ್ಲಿ ಸಾಬೀ ತಾಗಿದೆ ಎಂದು ಹೇಳಿದರು.

ದತ್ತಿ ದಾನಿಗಳಾದ ಜಗದೀಶ್ ಒಡೆಯರ್ ಮಾತನಾಡಿದರು. ಸಾಹಿತ್ಯ ಪರಿಷತ್ ಅಧ್ಯಕ್ಷ ವಿ.ಟಿ.ಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭ ದಲ್ಲಿ ಸಾಹಿತ್ಯ ಪರಿಷತ್‌ನಿಂದ ಪ್ರಾಧ್ಯಾಪಕ ಡಾ. ಉಮೇಶ್ ಕುಂಸಿ, ನಿಲಯ ಮೇಲ್ವಿಚಾರಕ ಜಯಶೀಲ ಅವರನ್ನು ಅಭಿನಂದಿಸಲಾಯಿತು. ನಿಲಯ ಮೇಲ್ವಿಚಾರಕರಾದ ರಮೇಶಪ್ಪ, ಪ್ರಶಾಂತ್, ಪರಿಷತ್ ಗೌರವ ಕಾರ್ಯದರ್ಶಿ ಜಿ.ನಾಗೇಶ್, ಸಂಘಟನಾ ಕಾರ್ಯದರ್ಶಿ ಡಾ. ಪ್ರಸನ್ನ ಇನ್ನಿತರರು ಹಾಜರಿದ್ದರು. ಪರಿಷತ್‌ನಿಂದ ನಡೆಸಿದ ರಸಪ್ರಶ್ನೆ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ನೀಡಲಾಯಿತು.


## ಪುಲ್ವಾಮ ದಾಳಿ: ಹುತಾತ್ಮರಾದ ಯೋಧರಿಗೆ ಶ್ರದ್ಧಾಂಜಲಿ



**ಹೊನ್ನಾಳಿ:** ಪುಲ್ವಾಮ ದಾಳಿಯಲ್ಲಿ ಹುತಾತ್ಮರಾದ ಸಿಆರ್‌ಪಿಎಫ್ ಯೋಧರಿಗೆ ಮಾಜಿ ಸೈನಿಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ಗೌರವಾಧ್ಯಕ್ಷ ಎಂ.ವಾಸಪ್ಪ ಮಾತನಾಡಿ, ಇಂದಿನ ಪೀಳಿಗೆಗೆ ದೇಶಪ್ರೇಮ, ದೇಶಭಕ್ತಿಯ ಕುರಿತು ಅರಿವು ಮೂಡಿಸುವ ಕಾಲ ಬಂದಿದೆ ಎಂದು ಬೇಸರ ವ್ಯಕ್ತಪಡಿಸಿದರು. ಇಂದಿನ ಯುವಕರು ಸಾಮಾಜಿಕ ಕಳಕಳಿಯಲ್ಲಿ ಹೆಚ್ಚಾಗಿ ಆಸಕ್ತಿ ತೋರುತ್ತಿಲ್ಲ. ದೇಶಭಕ್ತಿ ಎಂದರೆ ಮಾತಾಡುವುದು, ಘೋಷಣೆ ಕೂಗುವುದು, ಕಣ್ಣೀರು ಹಾಕುವುದು ಅಷ್ಟೇ ಎಂದು ತಿಳಿದುಕೊಂಡಿದ್ದಾರೆ. ಆದರೆ ದೇಶದ ಜನರ ರಕ್ಷಣೆ ಮಾಡುವ ಸೈನಿಕರು ಕಂಡಾಗ ಅವರಿಗೆ ಕನಿಷ್ಠ ಮಟ್ಟದ ಗೌರವ ತೋರುವ ಕೆಲಸ ಮಾಡುತ್ತಿಲ್ಲ ಎಂದರು. ಸೈನಿಕರು ದೇಶಕ್ಕೆ ಆಪತ್ತು ಬಂದಾಗ ತಮ್ಮ ಪ್ರಾಣ ಕೊಟ್ಟು ರಕ್ಷಣೆಗೆ ನಿಲ್ಲುತ್ತಾರೆ. ಅಂತಹ ಸೈನಿಕರ ಬಗ್ಗೆ ಇನ್ನು ಮುಂದಾದರೂ ಗೌರವ ಕೊಡುವುದನ್ನು ಕಲಿಯಬೇಕು ಎಂದರು.ಮಾಜಿ ಸೈನಿಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಪರಮೇಶ್ವರಪ್ಪ ಗೌಡ ಅವರು ಹುತಾತ್ಮ ಯೋಧರ ಕುರಿತು ಮಾತನಾಡಿದರು. ಸಂಘದ ಕಾರ್ಯದರ್ಶಿ ಎಂ.ಮಂಜಪ್ಪ, ಮಾಜಿ ಸೈನಿಕರಾದ ರಾಮಪ್ಪ ಜೀನಹಳ್ಳಿ, ತೋಟಪ್ಪ, ಹನುಮಂತಪ್ಪ ಸೊರಟೂರು, ಹನುಮಂತಪ್ಪ ದಿಡಗೂರು, ಹಿರೇಮಠ ರಮೇಶ್, ಮಾಜಿ ಸೈನಿಕರ ಕುಟುಂಬದವರಾದ ಎಚ್.ಕೆ. ಯಶೋಧ, ಜಯಲಕ್ಷ್ಮೀ, ಮುಖಂಡರಾದ ಹೊಸಕೇರಿ ಸುರೇಶ್, ಲಕ್ಷ್ಮೀಕಾಂತ್, ವಶಿಷ್ಠ, ಲಾಯರ್ ಮಂಜುನಾಥ್, ಪಿ.ಎಂ.ಸಿದ್ದಯ್ಯ ಇದ್ದರು.

## ಹುತಾತ್ಮ ವೀರಯೋಧರಿಗೆ ಶ್ರದ್ಧಾಂಜಲಿ

**ಸಾಗರ:** ಇಲ್ಲಿನ ಸಾಗರ ಹೋಟೆಲ್ ವೃತ್ತದಲ್ಲಿ ಶುಕ್ರವಾರ ಬಿಜೆಪಿ ಯುವ ಮೋರ್ಚಾ, ವಿಶ್ವಹಿಂದೂ ಪರಿಷತ್ ಮತ್ತು ಬಜರಂಗ ದಳದ ವತಿಯಿಂದ ಪುಲ್ವಾಮ ದಾಳಿಯಲ್ಲಿ ಹುತಾತ್ಮರಾದ ವೀರಯೋಧರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.ಈ ಸಂದರ್ಭದಲ್ಲಿ ಮಾತನಾಡಿದ ಬಜರಂಗ ದಳದ ಜಿಲ್ಲಾ ಸಂಚಾಲಕ ಸಂತೋಷ್ ಶಿವಾಜಿ, ಫೆ.14 ಅತ್ಯಂತ ಕರಾಳ ದಿನ. ನಮ್ಮ ವೀರ ಯೋಧ ರನ್ನು ಕಳೆದುಕೊಂಡಿದ್ದೇವೆ. ಯೋಧರ ಮೇಲೆ ಇಂತಹ ಘಟನೆ ನಡೆಯ ದಂತೆ ಕೇಂದ್ರ ಸರ್ಕಾರ ಅಗತ್ಯಕ್ರಮ ಕೈಗೊಳ್ಳಲಾಗಿದೆ. ನಮ್ಮ ಸೈನಿಕರಿಗೆ ಅತ್ಯಾಧುನಿಕ ಶಸ್ತ್ರಾಸ್ತ್ರ ನೀಡುವ ಮೂಲಕ ಸೈನಿಕರಲ್ಲಿ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಲಾಗಿದೆ. ರಾಜ್ಯದಲ್ಲಿ ಮತಾಂಧ ಶಕ್ತಿಗಳು ವಿಜೃಂ ಭಿಸುತ್ತಿದ್ದು, ಪೊಲೀಸರು, ಠಾಣೆಗಳ ಮೇಲೆ ದಾಳಿ ನಡೆಯುತ್ತಿದೆ. ತಕ್ಷಣ ಇದು ನಿಲ್ಲಬೇಕು ಎಂದು ಹೇಳಿದರು.2019ರ ಫೆಬ್ರವರಿ 14ರಂದು ಯೋಧರ ಮೇಲೆ ನಡೆದ ಬಾಂಬ್ ದಾಳಿ ಯಲ್ಲಿ 29ಕ್ಕೂ ಹೆಚ್ಚು ಯೋಧರು ಹುತಾತ್ಮರಾಗಿದ್ದಾರೆ. ಇದೊಂದು ಅತ್ಯಂತ ದುಃಖಕರ ಸಂಗತಿಯಾಗಿದೆ. ಹುತಾತ್ಮರಾದ ಯೋಧರ ಸಾವಿನ ಸೇಡನ್ನು ಪ್ರಧಾನಮಂತ್ರಿಗಳು ನೀಡಿದ ಭರವಸೆಯಂತೆ ಸರ್ಜಿಕಲ್ ಸ್ಟ್ರೈಕ್ ಮೂಲಕ ಭಯೋತ್ಪಾದಕರ ನೆಲೆ ಧ್ವಂಸ ಮಾಡಲಾಯಿತು. ದೇಶದಲ್ಲಿ ಸಾಕಷ್ಟು ಭಯೋತ್ಪಾದಕರನ್ನು ಮಟ್ಟಹಾಕಲಾಗಿದೆ. ಈಗ ದೇಶದಲ್ಲಿ ಯೋಧರಿಗೆ ಹೆಚ್ಚು ಸ್ವಾತಂತ್ರ್ಯ ನೀಡಲಾಗಿದ್ದು, ಭಯೋತ್ಪಾದಕರ ಮಟ್ಟ ಹಾಕುವ ಕೆಲಸ ಹಂತಹಂತವಾಗಿ ನಡೆಯುತ್ತಿದೆ. ಯೋಧರಲ್ಲಿ ಆತ್ಮಸ್ಥೈರ್ಯ ತುಂಬುವ ಕೆಲಸವನ್ನು ಕೇಂದ್ರ ಸರ್ಕಾರ ಮಾಡುತ್ತಿದೆ ಎಂದರು. ಈ ಸಂದರ್ಭದಲ್ಲಿ ಸುನೀಲ್ ರುದ್ರಪ್ಪ, ವಿನೋದ್‌ರಾಜ್, ವಿ.ಮಹೇಶ್, ಪ್ರಶಾಂತ್ ಕೆ.ಎಸ್. ಇನ್ನಿತರರು ಹಾಜರಿದ್ದರು.



## ನಾಡಿದ್ದು ಮಹಾಶಿವರಾತ್ರಿ: ಪ್ರಾಣಿ ವಧೆ ನಿಷೇಧ

**ಚಿಕ್ಕಮಗಳೂರು:** ಫೆಬ್ರವರಿ 26 ರಂದು ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಚಿಕ್ಕಮಗಳೂರು ನಗರ ಸಭೆ ವ್ಯಾಪ್ತಿಯಲ್ಲಿ ಇರುವ ಕೋಳಿ, ಕುರಿ, ಮೀನು, ಮಾಂಸ ಮಾರಾಟಗಾರರು ಹಾಗೂ ಮಾಂಸಹಾರಿ ಹೋಟೆಲ್ ಮತ್ತು ರೆಸ್ಟೋರೆಂಟ್ ಮಾಲೀಕರು ಕಡ್ಡಾಯವಾಗಿ ಪ್ರಾಣಿ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಿದೆ ಹಾಗೂ ಕೋಳಿ, ಕುರಿ, ಮೀನು, ಮಾಂಸ ಮಾರಾಟಗಾರರು ಮತ್ತು ಮಾಂಸಹಾರಿ ಹೋಟೆಲ್‌ಗಳನ್ನು ತೆರೆಯಬಾರದೆಂದು, ತಪ್ಪಿದಲ್ಲಿ ಅಂತಹ ಮಾಂಸ ಮಾರಾಟ ಮಾಡುವವರ ಮತ್ತು ಮಾಂಸಹಾರಿ ಹೋಟೆಲ್‌ಗಳ ವಿರುದ್ಧ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುವುದೆಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಅಂಚೆ ಅದಾಲತ್

**ಚಿಕ್ಕಮಗಳೂರು:** ಚಿಕ್ಕಮಗಳೂರು ಅಂಚೆ ಇಲಾಖೆ ವತಿಯಿಂದ ಫೆಬ್ರವರಿ 25 ರಂದು ಸಂಜೆ 4.00 ಗಂಟೆಗೆ ನಗರದ ಅಂಚೆ ಅಧೀಕ್ಷಕರ ಕಛೇರಿಯಲ್ಲಿ ಸಾರ್ವಜನಿಕರಿಂದ ಕುಂದುಕೊರತೆಗಳನ್ನು ಹಾಗೂ ಗ್ರಾಹಕರುಗಳ ವ್ಯತ್ಯಯ ಸ್ವೀಕರಿಸಲು ಅಂಚೆ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ತಮ್ಮ ದೂರುಗಳನ್ನು ಖುದ್ದಾಗಿ ಅಥವಾ ಅಂಚೆಯ ಮೂಲಕ ನೀಡಬಹುದಾಗಿದೆ. ವಿಳಾಸ – ಅಂಚೆ ಅಧೀಕ್ಷಕರು, ಚಿಕ್ಕಮಗಳೂರು ವಿಭಾಗ, ಚಿಕ್ಕಮಗಳೂರು. ದೂ.ಸಂ. 08262–235950/ ಮೊ.ಸಂ. 9448291068 ಅಥವಾ ಇ–ಮೇಲ್ dochikmagalur.ka@indiapost.gov.in<mailto:dochikmagalur.ka@indiapost.gov.in>ಗೆ ಕಳುಹಿಸಬಹುದಾಗಿದೆ ಎಂದು ಚಿಕ್ಕಮಗಳೂರು ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಧ್ಯಕ್ಷರಾಗಿ ಪ್ರಶಾಂತ್ ಎಲ್. ಶೆಟ್ಟಿ ಆಯ್ಕೆ


**ನರಸಿಂಹರಾಜಪುರ:** ಪಟ್ಟಣ ಪಂಚಾಯಿತಿಯ ಸ್ಥಾಯಿ ಸಮಿತಿಗೆ ಸತತ 3ನೇ ಅವಧಿಗೆ ಅಧ್ಯಕ್ಷರಾಗಿ ಪ್ರಶಾಂತ್ ಎಲ್. ಶೆಟ್ಟಿ ಅವಿರೋಧವಾಗಿ ಆಯ್ಕೆಯಾದರು. ಸಾಮಾನ್ಯ ಸಭೆಯಲ್ಲಿ ಸ್ಥಾಯಿ ಸಮಿತಿ ರಚಿಸುವ ವಿಚಾರ ಚರ್ಚೆಗೆ ಬಂತು. ಪಟ್ಟಣ ಪಂಚಾಯಿತಿ ಸದಸ್ಯ ಮುನಾವರ ಪಾಷ ಪ್ರಶಾಂತ್ ಶೆಟ್ಟಿ ಅವರ ಹೆಸರು ಸೂಚಿಸಿದರು. ಸದಸ್ಯ ಆರ್.ಕುಮಾರಸ್ವಾಮಿ ಅನುಮೋದಿಸಿದರು. ಸ್ಥಾಯಿ ಸಮಿತಿ ಸದಸ್ಯರಾಗಿ ಮುನಾವರಪಾಷ, ಮುಕುಂದ, ಪಿ.ಜೆ. ಶೋಜಾ, ಆರ್. ಕುಮಾರಸ್ವಾಮಿ ಆಯ್ಕೆಯಾದರು. ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಆರ್.ವಿ. ಮಂಜುನಾಥ್, ಉಪಾಧ್ಯಕ್ಷೆ ಉಮಾ ಕೇಶವ್ ಭಾಗವಹಿಸಿದ್ದರು.

## ಸ್ವಚ್ಛತೆಗೆ ಆದ್ಯತೆ ನೀಡಬೇಕು

**ಕೊಪ್ಪ:** ಪಟ್ಟಣವನ್ನು ಕಸದಿಂದ ಮುಕ್ತ ಮಾಡಲು ಪಟ್ಟಣ ಪಂಚಾಯಿತಿಯೊಂದಿಗೆ ಸಾರ್ವಜನಿಕರು ಕೈ ಜೋಡಿಸಿ ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದು ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಗಾಯತ್ರಿ ವಸಂತ್ ಹೇಳಿದರು. ಪಟ್ಟಣ ನಿವಾಸಿಗಳಿಗೆ ಕಸದ ಬುಟ್ಟಿ ವಿತರಿಸಿ ಅವರು ಮಾತನಾಡಿದರು ಪಟ್ಟಣ ಪಂಚಾಯಿತಿ ಉಪಾಧ್ಯಕ್ಷೆ ಗಾಯತ್ರಿ ಶೆಟ್ಟಿ, ಸ್ಥಾಯಿ ಸಮಿತಿ ಅಧ್ಯಕ್ಷ ಇಸ್ಮಾಯಿಲ್, ಸದಸ್ಯರಾದ ಎಚ್.ಆರ್.ರೇಖಾ, ಹೇಮಾವತಿ, ವಿಜಯಕುಮಾರ್, ಮೈತ್ರಿ, ಮುಖ್ಯಧಿಕಾರಿ ಚಂದ್ರಕಾಂತ್ ಭಾಗವಹಿಸಿದ್ದರು.

## ಫೆ.25ಕ್ಕೆ ದೆಹಲಿಗೆ ಡಿಸಿಎಂ ಡಿಕೆ.ಶಿವಕುಮಾರ್: ರಾಹುಲ್ ಗಾಂಧಿ, ಖರ್ಗೆ ಭೇಟಿ

**ಬೆಂಗಳೂರು:** ಫೆಬ್ರವರಿ 25 ರಂದು ರಾಷ್ಟ್ರ ರಾಜಧಾನಿ ನವದೆಹಲಿಗೆ ಕೆಪಿಸಿಸಿ ಅಧ್ಯಕ್ಷ ಮತ್ತು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಭೇಟಿ ನೀಡಲಿದ್ದು, ಈ ವೇಳೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡುವ ಸಾಧ್ಯತೆಗಳಿವೆ ಎಂದು ತಿಳಿದುಬಂದಿದೆ. ದೆಹಲಿಗೆ ಭೇಟಿ ನೀಡಲಿರುವ ಡಿಕೆ.ಶಿವಕುಮಾರ್ ಅವರು, ಭೇಟಿ ವೇಳೆ ಬೆಂಗಳೂರಿನ ರೇಸ್ ಕೋರ್ಸ್ ರಸ್ತೆಯಲ್ಲಿ ನಿರ್ಮಾಣವಾಗಲಿರುವ ಹೊಸ ಕಾಂಗ್ರೆಸ್ ಭವನದ ಶಂಕುಸ್ಥಾಪನೆ ಕಾರ್ಯಕ್ರಮಕ್ಕೆ ಆಹ್ವಾನ ನೀಡಲಿದ್ದಾರೆಂದು ಮೂಲಗಳು ತಿಳಿಸಿವೆ. ಇದಲ್ಲದೆ, ರಾಜ್ಯ ರಾಜಕೀಯ ಬೆಳವಣಿಗೆಗಳ ಬಗ್ಗೆಯೂ ಚರ್ಚಿಸುವ ಸಾಧ್ಯತೆಗಳಿವೆ ಎಂದು ಹೇಳಲಾಗುತ್ತಿದೆ.ಏತನ್ಮಧ್ಯೆ, ಕೇಂದ್ರ ಜಲಶಕ್ತಿ ಸಚಿವ ಸಿಆರ್ ಪಾಟೀಲ್ ಅವರನ್ನೂ ಭೇಟಿ ಮಾಡಲಿರುವ ಅವರು, ರಾಜ್ಯದ ನೀರಾವರಿ ಯೋಜನೆಗಳ ಕುರಿತು ಚರ್ಚಿಸಲಿದ್ದಾರೆ. ಮೇಕೆದಾಟು ಮತ್ತು ಕಳಸಾ ಬಂಡೂರಿ ಯೋಜನೆಗಳಿಗೆ ಅನುಮತಿ ಪಡೆಯುವಲ್ಲಿ ವಿಳಂಬ ಮತ್ತು 2024–25ರ ಬಜೆಟ್ನಲ್ಲಿ ಕೇಂದ್ರವು ಹಂಚಿಕೆ ಮಾಡಿದ್ದ ಭದ್ರಾ ಮೇಲ್ದಂಡ ಯೋಜನೆಗೆ 5,300 ಕೋಟಿ ರೂ. ಬಿಡುಗಡೆಯಲ್ಲಿ ವಿಳಂಬ ಕುರಿತು ಡಿಕೆ.ಶಿವಕುಮಾರ್ ಅವರು ಕೇಂದ್ರ ಸಚಿವರೊಂದಿಗೆ ಚರ್ಚೆ ನಡೆಸುವ ಸಾಧ್ಯತೆಗಳಿವೆ ಎಂದು ತಿಳಿದು ಬಂದಿದೆ.



# ಪ್ರಾಗೈತಿಹಾಸಿಕ ನೆಲೆಗಳು ಪತ್ತೆ

**ಚಿಂತಾಮಣಿ:** ತಾಲ್ಲೂಕಿನ ಬಟ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಿದ್ದನಮಲೆಬೆಟ್ಟದ ಸುತ್ತಮುತ್ತ 40 ಅಪ್ರಕಟಿತ ಪ್ರಾಗೈತಿಹಾಸಿಕ ತಾಣಗಳನ್ನು ಸಂಶೋಧಕ ಎ.ಪವನ್ ಮೌರ್ಯ ಚಕ್ರವರ್ತಿ ತಂಡ ಪತ್ತೆ ಹಚ್ಚಿದೆ.

ತಾಲ್ಲೂಕು ಕೇಂದ್ರದಿಂದ ಸುಮಾರು 40 ಕಿ.ಮೀ ದೂರದಲ್ಲಿರುವ ಸಿದ್ದನಮಲೆಬೆಟ್ಟವನ್ನು ಕೊನಕುಂಟ್ಲು ಎಂದೂ ಕರೆಯಲಾಗುತ್ತದೆ. ಕರ್ನಾಟಕ ರಾಜ್ಯ ಪುರಾತತ್ವ ಇಲಾಖೆಯ ಗ್ರಾಮವಾರು ಸಮೀಕ್ಷೆಯಲ್ಲಿ ಸುಮಾರು 40ಕ್ಕೂ ಹೆಚ್ಚು ಅಪ್ರಕಟಿತ ಪ್ರಾಗೈತಿಹಾಸಿಕ ತಾಣಗಳು ಪತ್ತೆಯಾಗಿವೆ. ಸಿದ್ದನಮಲೆಬೆಟ್ಟ ಅಥವಾ ಕೊನಕುಂಟ್ಲು ಪ್ರದೇಶವು ಪ್ರಾಚೀನ ರಾಜಕೀಯ ಇತಿಹಾಸದಲ್ಲಿ ಬಹಳ ಪ್ರಸಿದ್ಧ ಸ್ಥಳವಾಗಿತ್ತು.

ಇದು ಕೊಯಿಕುರೆ ನಾಡಿನ ರಾಜಧಾನಿಯಾಗಿತ್ತು. ಬೆಟ್ಟದ ಮೇಲೆ ಕೋಟೆಯ ಅವಶೇಷಗಳಿವೆ. ಬೆಟ್ಟದ ಬಳಿ ಎರಡು ನೈಸರ್ಗಿಕ ಗುಹೆಗಳಿವೆ. ಚೋಳರ ಕಾಲದಲ್ಲಿ ಅವುಗಳನ್ನು ಶಿವ ದೇವಾಲಯಗಳಾಗಿ ಪರಿವರ್ತಿಸಲಾಯಿತು. ಸಿದ್ದರ ಗವಿಯ ಉತ್ತರಕ್ಕೆ ಬೃಹತ್ ಬಂಡೆ ಇದೆ. ಇದು ಸುಮಾರು 30 ಅಡಿ ಎತ್ತರ, 30 ಅಡಿ ಉದ್ದ ಮತ್ತು 120 ಅಡಿಗಳಿಗಿಂತ ಹೆಚ್ಚು ಸುತ್ತಳತೆಹೊಂದಿದೆ.

ಇಲ್ಲಿ 20ಕ್ಕೂ ಹೆಚ್ಚು ನವಶಿಲಾಯುಗದ (ತಾಮ್ರಯುಗ) ಗೂಳಿಗಳು, ನವಿಲುಗಳು, ಆನೆಗಳು, ಕಾಡುಹಂದಿಗಳು ಮತ್ತು ಮನುಷ್ಯರ ವರ್ಣಚಿತ್ರಗಳು ಕಂಡುಬಂದಿವೆ. ಆ ಕಾಲದ ಮನುಷ್ಯ ಪ್ರಾಣಿಗಳನ್ನು ಪಳಗಿಸಿ ಪಶುಪಾಲನೆ ಶುರುಮಾಡಿದ್ದ ಎಂದು ತಿಳಿದುಬರುತ್ತದೆ. ಕೆಲವು ಗೂಳಿಗಳನ್ನು ಅವುಗಳ ಶಿಶ್ನಗಳೊಂದಿಗೆ ತೋರಿಸಲಾಗಿದೆ. ಈ

ರೀತಿಯ ವರ್ಣ ಚಿತ್ರಗಳು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಮೊದಲ ಬಾರಿಗೆ ಕಂಡು ಬಂದಿದೆ ಎಂದು ಸಂಶೋಧಕ ಎ.ಪವನ್ ಮೌರ್ಯ ಚಕ್ರವರ್ತಿ ಅಭಿಪ್ರಾಯಪಡುತ್ತಾರೆ. ಕೆಲವೆಡೆ ಬಂಡೆ ಮೇಲೆ ಕಟ್ಟು ಚಿತ್ರಗಳು ಸಿಕ್ಕಿವೆ. ಸಿದ್ದನಮಲೆ ಬೆಟ್ಟದಲ್ಲಿ ಕಂಡುಬರುವ ಈ ವರ್ಣ ಚಿತ್ರಗಳು ಮೊದಲ ಬಾರಿಗೆ ಕಂಡುಬಂದಿವೆ ಎಂದು ತೀರ್ಮಾನಿಸಬಹುದು. ಅದೇ ಪರಿಸರದಲ್ಲಿ ಮಧ್ಯ ಶಿಲಾಯುಗ ಮತ್ತು ನವಶಿಲಾಯುಗದ ಸಣ್ಣ ಪ್ರಮಾಣದ ಕಲ್ಲಿನ ಉಪಕರಣಗಳು ಕಂಡು ಬಂದಿವೆ. ಬಂಡೆಯ ಇಳಿಜಾರಿನಲ್ಲಿ 100 ಮೀಟರ್ ಮುಂದೆಹೋದರೆ, ಬೃಹತ್ ಶಿಲಾಯುಗದ ಅವಧಿಯ ದೊಡ್ಡ ನೆಲಕೋ ಣೆ ಸಮಾಧಿಗಳನ್ನು ಕಾಣಬಹುದು ಎಂದು ಹೇಳಿದ್ದಾರೆ.

ಈ ಪರಿಸರದಲ್ಲಿ ವ್ಯಾಪಕವಾದ ಕಬ್ಬಿಣದ ಕಿಟ್ಟಗಳು, ಶಿಲಾಯುಗದ ಕೆಂಪು ಮತ್ತು ಕಪ್ಪು ಮಡಿಕೆಗಳ ಚೂರುಗಳು ಕಂಡುಬಂದಿವೆ. ಐತಿಹಾಸಿಕ ಕಾಲದಲ್ಲಿ ಜನರು ಉಪಯೋಗಿಸುತ್ತಿದ್ದ ಮಡಿಕೆ ಅವಶೇಷಗಳು ಎಂದು ಸಂಶೋಧಕರು ಹೇಳುತ್ತಾರೆ.

ಈ ಸಂಶೋಧನೆಯುಪ್ರಾಗೈತಿಹಾಸಿಕ ಇತಿಹಾಸಕ್ಕೆ ಒಂದು ದೊಡ್ಡ ಕೊಡುಗೆಯಾಗಿದೆ. ಇದು ಪ್ರಾಗೈ ತಿಹಾಸಿಕ ಇತಿಹಾಸವನ್ನು ಶ್ರೀಮಂತಗೊಳಿಸಿದೆ ಎಂದು ಹೇಳಬಹುದು.








## ಮಕ್ಕಳಿಗೂ 'ಅನ್ನದಾನ' ಮಹತ್ವ ತಿಳಿಸಿಕೊಡುತ್ತಿರುವ ಶ್ರೀಸೋಮೇಶ್ವರ ವಿದ್ಯಾಲಯ : ಕೆ. ಎಂ ಸುರೇಶ್





**ದಾವಣಗೆರೆ:** ದಾನದಲ್ಲಿ ಶ್ರೇಷ್ಠವಾದದ್ದು ಅನ್ನದಾನ ಕೂಡ ಒಂದು. ಅನ್ನದಾನ ಮಾಡುವುದು ಹಿಂದೂ ಧರ್ಮದ ಅತ್ಯಗತ್ಯ ಸದ್ಗುಣವಾಗಿದೆ ಎಂದು ನಗರದ ಶ್ರೀ ಸೋಮೇಶ್ವರ ವಿದ್ಯಾಲಯದ ಗೌರವ ಕಾರ್ಯದರ್ಶಿಗಳಾದ ಕೆ. ಎಂ ಸುರೇಶ್ ರವರು ತಿಳಿಸಿದರು.

ಮೂರನೇ ಬಾರಿಗೆ ಶ್ರೀಕ್ಷೇತ್ರ ಧರ್ಮಸ್ಥಳಕ್ಕೆ ಅಕ್ಕಿ ಸಮರ್ಪಣೆ ಕಾರ್ಯಕ್ರಮದಲ್ಲಿ ಈ ವಿಷಯ ತಿಳಿಸಿದರು. ಶ್ರೀ ಸೋಮೇಶ್ವರ ವಿದ್ಯಾಲಯ ಕೇವಲ ಅಕ್ಷರ ಕಲಿಸುವ ಕೆಲಸ ಮಾಡುತ್ತಿಲ್ಲ, ಜೊತೆಗೆ ಮಕ್ಕಳಲ್ಲಿ ದಾನದ ಶ್ರೇಷ್ಠತೆಯನ್ನು ಮೈಡಿಸಿಕೊಳ್ಳುವಂತ ಮನೋಭಾವ ಬೆಳಸುತ್ತಿದೆ ಎಂದರು. ಈ ಕಾರಣ ಶಾಲಾ ಮಕ್ಕಳು ಸಹ ಒಂದು ಹಿಡಿ ಅಕ್ಕಿ ನೀಡುವ ಮೂಲಕ ಸೇವೆಯಲ್ಲಿ ಭಾಗಿಯಾಗಿದ್ದಾರೆ ಎಂದರು. ಇದರ ಉದ್ದೇಶ ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬಂತೆ ಪ್ರಾಥಮಿಕ ಹಂತದಲ್ಲಿಯೇ ಸಮಾಜ ಸೇವೆ ದಾನ ಧರ್ಮದಂತ ಕಾರ್ಯಕ್ರಮಗಳ ಬಗ್ಗೆ ಮಕ್ಕಳಿಗೆ ತಿಳಿಸಿಕೊಡಬೇಕು, ಈ ಕಾರಣ ನಮ್ಮ ವಿದ್ಯಾಲಯ ವಿದ್ಯೆ ಜೊತೆಗೆ ಅನ್ನದಾನದ ಮಹತ್ವತೆಯನ್ನು ಈ ಮೂಲಕ ತಿಳಿಸುತ್ತಿದೆ ಎಂದರು. ಬಳಿಕ ಮಾತನಾಡಿದ ಮಹಾನಗರ ಪಾಲಿಕೆ ವಿರೋಧ ಪಕ್ಷದ ನಾಯಕರಾದ ಪ್ರಸನ್ನ ಕುಮಾರ್ ಅನ್ನದಾನ, ಅಥವಾ ಆಹಾರವನ್ನು ದಾನ ಮಾಡುವ ಕ್ರಿಯೆಯು ಭಾರತೀಯ ಸಂಸ್ಕೃತಿಯಲ್ಲಿ ಮಹತ್ತರವಾದ ಮಹತ್ವವನ್ನು ಹೊಂದಿದೆ. ಇದು ದಾನಿಗೆ ಆಶೀರ್ವಾದ ಮತ್ತು ಆಧ್ಯಾತ್ಮಿಕ ಅರ್ಹತೆಯನ್ನು ತರುತ್ತದೆ ಎಂದು ತಿಳಿಸಿದರು.ನೀವು ಅಕ್ಷಯ ಚೈತನ್ಯದ ಮೂಲಕ ಆಹಾರವನ್ನು ದಾನ ಮಾಡಿದಾಗ, ನೀವು ನಿಮ್ಮ ಧಾರ್ಮಿಕ ಜವಾಬ್ದಾರಿಗಳನ್ನು ಪೂರೈಸುವುದು ಮಾತ್ರವಲ್ಲದೆ ಹಸಿವನ್ನು ನಿವಾರಣೆ ಮಾಡುವಲ್ಲಿಯೂ ಪಾತ್ರವಹಿಸತ್ತದೆ, ಹೀಗಾಗಿ ಸುರೇಶ್ ಅವರು ಮಕ್ಕಳನ್ನು ದಾನದ ಸೇವೆಯಲ್ಲ ತೊಡಗಿಸಿಕೊಂಡಿರುವುದು ನಿಜಕ್ಕೂ ಉತ್ತಮ ಸೇವೆ ಎಂದರು.ಈ ವೇಳೆ ಯುವ ಮೋರ್ಚಾ ನಿಕಟಪೂರ್ವ ಕಾರ್ಯದರ್ಶಿಗಳಾದ ವೀರಣ್ಣ, ಶಾಲೆಯ ಪ್ರಾಚಾರ್ಯರು, ಆಡಳಿತಧಿಕಾರಿಗಳು, ಶೈಕ್ಷಣಿಕ ನಿರ್ದೇಶಕರು, ಮುಖ್ಯೋಪಾಧ್ಯಾಯರು, ಶಿಕ್ಷಕ–ಶಿಕ್ಷಕೇತರ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಆನೆ ದಾಳಿಯಿಂದ ಇ.ಟಿ.ಎಫ್. ಸಿಬ್ಬಂದಿ ಪಾರು

**ಚಿಕ್ಕಮಗಳೂರು:** ಜಿಲ್ಲೆಯ ಮಲೆನಾಡ ಭಾಗದಲ್ಲಿ ಆನೆ ಹಾವಳಿ ಮುಂದುವರೆದಿದ್ದು,



ಆನೆ ದಾಳಿಯಿಂದ ಇ.ಟಿ.ಎಫ್. ( ಎಲಿಫೆಂಟ್ ಟಾಸ್ಕ್ ಫೋರ್ಸ್) ಸಿಬ್ಬಂದಿಯೋರ್ವ ಮರಹತ್ತಿ ಜೀವ ಉಳಿಸಿಕೊಂಡಿರುವ ಘಟನೆ ನಡೆದಿದೆ.ಎನ್.ಆರ್.ಪುರ ಎನ್.ಆರ್.ಪುರ ತಾಲೂಕಿನಲ್ಲಿ ಇತ್ತೀಚೆಗೆ ಆನೆ ಹಾವಳಿ ಮಿತಿ ಮೀರಿದೆ. ಕಾಡಾನೆಗಳು ಪ್ರತಿನಿತ್ಯ ಪುಂಡಾಟ ಮೆರೆಯುತ್ತಿದ್ದು, ಮೂರು ತಿಂಗಳಲ್ಲಿ ಇಬ್ಬರು ಆನೆ ದಾಳಿಗೆ ತುತ್ತಾಗಿದ್ದಾರೆ.ಸಾಲೂರಿನ ಬಳಿ ಕಾಫಿತೋಟಕ್ಕೆ ಬಂದಿದ್ದ ಪುಂಡಾನೆಯೊಂದನ್ನು ಓಡಿಸಲು ಹೋಗಿದ್ದ ಇ.ಟಿ.ಎಫ್. ಸಿಬ್ಬಂದಿ ಮೇಲೆಯೇ ಆನೆ ಅಟ್ಯಾಕ್ ಮಾಡಲು ಮುಂದಾಗಿದೆ. ತಕ್ಷಣ ಎಚ್ಚೆತ್ತ ಇಟಿಎಫ್ ಸಿಬ್ಬಂದಿ ಮರವನ್ನೇರಿ ಕುಳಿತು ಜೀವ ಉಳಿಸಿಕೊಂಡಿದ್ದಾರೆ.ಮರವೇರಿ ಕುಳಿತ ನಂತರವೂ ಕಾಡಾನೆ ಮರವನ್ನು ಅಲುಗಾಡಿಸಲು ಮುಂದಾಗಿದ್ದು, ಈ ದೃಶ್ಯವನ್ನು ಮರದ ಮೇಲೆ ಕುಳಿತುಕೊಂಡು ಆನೆ ನಿಗ್ರಹ ದಳದ ಸಿಬ್ಬಂದಿ ಮೊಬೈಲ್ ನಲ್ಲಿ ಸೆರೆ ಹಿಡಿದಿದ್ದಾರೆ. ಆನೆ ದಾಳಿ ಹಾಗೂ ಹಾವಳಿಯಿಂದ ಕಂಗೆಟ್ಟಿದ್ದು ಕೂಡಲೇ ಅರಣ್ಯ ಇಲಾಖೆ ಅಧಿಕಾರಿಗಳು ಆನೆ ಹಾವಳಿಗೆ ಶಾಶ್ವತ ಬ್ರೇಕ್ ಹಾಕಬೇಕೆಂದು ಜನ ಆಗ್ರಹಿಸಿದ್ದಾರೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**